# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –275 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:26–05–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 275 | RNI No: KARKAN/2023/88462 | KA/SK/CTA-874/2024-2026 | Chitradurga | Date: 26-05-2025 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸೇವಾ ಮನೋಭಾವ ಮೈಗೂಡಿಸಿಕೊಳ್ಳಲು ಎನ್‌ಎಸ್‌ಎಸ್ ಸಹಕಾರಿ: ಕಾಟವ್‌ಕರ್ 2

ಸಂಖ್ಯಾಜ್ಞಾನಕ್ಕೆ ಕಲಿಕಾ ಪರ್ವ ಕೈಗನ್ನಡಿ: ಬಿಇಒ ನಾಗಭೂಷಣ್ 3

ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಚುನಾವಣೆ: ತಳಕು ಕ್ಷೇತ್ರದಿಂದ ಟಿಎಟಿ ಕುಮಾರ್ ಆಯ್ಕೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ರೋಟರಿ ಬಾಲಭವನದಲ್ಲಿ ಕಾರ್ಮಿಕರ ದಿನಾಚರಣೆ

» **ಚಿತ್ರದುರ್ಗ**

ನ್ಯಾಷನಲ್ ಸೆಂಟರ್ ಫಾರ್ ಲೇಬರ್ ಸೇರ್ಪಡೆ. ಕರ್ನಾಟಕ ರಾಜ್ಯ ಕಟ್ಟಡ ಕಾರ್ಮಿಕರ ಕೇಂದ್ರ ಸಂಘ ಜಿಲ್ಲಾ ಶಾಖೆ ವತಿಯಿಂದ ರೋಟರಿ ಬಾಲಭವನದಲ್ಲಿ ಮೇ.27 ರಂದು ಬೆಳಿಗ್ಗೆ 11–30 ಕ್ಕೆ ಕಾರ್ಮಿಕರ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ಕಾರ್ಮಿಕರ ದಿನಾಚರಣೆ ಉದ್ಘಾಟಿಸಲಿದ್ದಾರೆ. ಕೆ.ಎಸ್.ಸಿ.ಡಬ್ಲ್ಯೂ.ಸಿ.ಯು. ಜಿಲ್ಲಾಧ್ಯಕ್ಷ ವೈ.ಸತ್ಯಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕೆ.ಎಸ್.ಸಿ.ಡಬ್ಲ್ಯು.ಸಿ.ಯು. ರಾಜ್ಯಾಧ್ಯಕ್ಷ ಎನ್.ಪಿ.ಸ್ವಾಮಿ, ಪ್ರಧಾನ ಕಾರ್ಯದರ್ಶಿ ಲೀಲಾವತಿ, ಕಾರ್ಮಿಕ ಅಧಿಕಾರಿ ಅನಿಲ್ ಬಾಲಚಂದ್ರ ಬಗಟಿ ಕಾರ್ಮಿಕ ನಿರೀಕ್ಷಕರುಗಳಾದ ಪಿ.ಭೀಮೇಶ್, ರಾಜಣ್ಣ, ಕೆ.ಎಸ್.ಸಿ.ಡಬ್ಲ್ಯು.ಸಿ.ಯು. ಜಿಲ್ಲಾ ಸಂಚಾಲಕ ಗಣೇಶ್ ಇನ್ನು ಅನೇಕರು ಪಾಲ್ಗೊಳ್ಳಲಿದ್ದಾರೆಂದು ಪಿ.ಎಂ.ನಾಗರಾಜ್ ಪಿಳ್ಳೆಕೇರನಹಳ್ಳಿ ತಿಳಿಸಿದ್ದಾರೆ.

### ವಿಶ್ವಾಮಿತ್ರ ಲೈಟ್‌ಫೌಂಡೇಷನ್ ವತಿಯಿಂದ ಸಸ್ಯಹಾರ ಜನಜಾಗೃತಿ ಜಾಥಾ



» **ಚಳ್ಳಕೆರೆ**

ದಿನನಿತ್ಯದ ಬದುಕಿನ ಜಂಜಾಟದಲ್ಲಿ ನೆಮ್ಮದಿ ಮತ್ತು ಶಾಂತಿಯನ್ನು ಬಯಸುವುದು ತಪ್ಪಲ್ಲ. ಆದರೆ, ಹಲವಾರು ಬಾರಿ ನಮ್ಮದೇಯಾದ ಸಮಸ್ಯೆಗಳಿಂದ ನಾವು ವಿಶ್ವಾಸವನ್ನು ಕಳೆದುಕೊಳ್ಳುವ ಹಾದಿತುಳಿಯುತ್ತೇವೆ. ಆದರೆ, ಪ್ರತಿಯೊಬ್ಬ ವ್ಯಕ್ತಿಯ ಬದುಕಿನಲ್ಲಿ ನೆಮ್ಮದಿ ಶಾಂತಿಯೊಂದಿಗೆ ಸಂತೃಪ್ತಿಯನ್ನು ಸಾಧನೆ ಮಾಡಲು ಸಾಧ್ಯವಿದೆ. ನಿತ್ಯ ಧ್ಯಾನದಿಂದ ಈ ಕಾರ್ಯ ಸಾಧ್ಯವೆಂದು ತ್ಯಾಗರಾಜನಗರದ ವೀರಭದ್ರೇಶ್ವರ ಪಿರಮಿಡ್ ಧ್ಯಾನಕೇಂದ್ರದ ಮುಖ್ಯಸ್ಥ ಎ.ಸಿ.ನಾಗೇಂದ್ರನ್ ತಿಳಿಸಿದರು. ಅವರು, ಭಾನುವಾರ ಹಳೇಟೌನ್‌ನ ಕೆ.ಸಿ.ಹೌಸ್ ಹಿಂಭಾಗದಲ್ಲಿರು ಪತ್ರೀಜಿ ಧ್ಯಾನಾಮೃತ ಧ್ಯಾನಕೇಂದ್ರದಲ್ಲಿ ವಿಶ್ವಾಮಿತ್ರ ಲೈಟ್‌ಫೌಂಡೇಷನ್ ವತಿಯಿಂದ ಹಮ್ಮಿಕೊಂಡಿದ್ದ ಬೃಹತ್ ಸಸ್ಯಹಾರಿ ಜನಜಾಗೃತಿ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು. ಸಾರ್ವಜನಿಕರು ಮಾಂಸಹಾರಗಳನ್ನು ತ್ಯಜಿಸಿ ಸಸ್ಯಹಾರಗಳ ಮೂಲಕ ಆರೋಗ್ಯವನ್ನು ಸದೃಢಗೊಳಿಸಿಕೊಳ್ಳಬೇಕು. ಯಾವುದೇ ಪ್ರಾಣಿಯನ್ನು ನಮ್ಮ ಆಹಾರಕ್ಕಾಗಿ ಉಪಯೋಗಿಸುವ ಪ್ರವೃತ್ತಿ ಒಳ್ಳೆಯದ್ದಲ್ಲವೆಂದರು. ಮಹದೇವಿತಿಪ್ಪೇಸ್ವಾಮಿ, ಸೌಮ್ಯ, ಲಕ್ಷ್ಮಿದೇವಿ, ಶ್ರೀಧರಚಾರ್, ವಿಜಯಕುಮಾರ್, ಎನ್.ಸುಧಾಕರ್, ಶಿವಣ್ಣ ಮುಂತಾದವರು ಉಪಸ್ಥಿತರಿದ್ದರು.

### ಎಸ್‌ಎಸ್‌ಎಲ್‌ಸಿ ಪರೀಕ್ಷೆ-2: ನಿಷೇಧಾಜ್ಞೆ ಜಾರಿ

» **ಚಿತ್ರದುರ್ಗ**

ಮೇ 26 ರಿಂದ ಜೂನ್ 02 ರವರಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ನಡೆಯಲಿರುವ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಆದೇಶಿಸಿದ್ದಾರೆ. ಜಿಲ್ಲಾದ್ಯಂತ 28 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಪರೀಕ್ಷೆ ನಡೆಯುವ ದಿನಾಂಕಗಳಂದು ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶದಲ್ಲಿ ಕಲಂ 144 ಸೆಕ್ಷನ್ ಜಾರಿ ಮಾಡಿ ನಿಷೇದಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷೆ ನಡೆಯುವ ಎಲ್ಲಾ ಕೇಂದ್ರಗಳ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ, ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ತೆರೆಯುವಂತಿಲ್ಲ. ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಅಥವಾ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರಲು ಅವಕಾಶವಿಲ್ಲ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ.

#### ಚನ್ನಸಮುದ್ರದಲ್ಲಿ ನಡೆದ ಸಂತಾಪ ಸಭೆಯ ದಿವ್ಯ ಸಾನಿಧ್ಯವಹಿಸಿ, ವಾಲ್ಮೀಕಿ ಶ್ರೀ ಅಭಿಮತ

# ಮದಕರಿ ಪುತ್ಥಳಿ ಸ್ಥಾಪನೆ ಕೀರ್ತಿ ರಂಗನಾಥ್‌ಗೆ

» **ಹೊಸದುರ್ಗ**

ಸಂಸಾರವೆಂಬುದು ಗಾಳಿಯ ಸುಡರು, ದೇಹವೆಂಬ ಡಿಪಾಫಲ್ಲಿ ಜೀವವೆಂಬ ದೀಪ ಉರಿಯುತ್ತಿರುತ್ತದೆ. ಈ ದೀಪ ಆರಿದ ಮೇಲೆ ಎಲ್ಲವೂ ಶೂನ್ಯ. ಬಡ ಮಕ್ಕಳನ್ನ ಗುರುತಿಸಿ ಪುರಸ್ಕರಿಸಿ, ಗಂಡು ಮೆಟ್ಟಿನ ನಾಡು ಹೊಸದುರ್ಗದಲ್ಲಿ ಮದಕರಿ ನಾಯಕರ ಪ್ರತಿಮೆ ಸ್ಥಾಪಿಸಿದ ಕೀರ್ತಿ ಕೆ.ಟಿ.ರಂಗನಾಥ್ ರವರಿಗೆ ಸಲ್ಲುತ್ತದೆ ಎಂದು ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಡಾ.ಪ್ರಸನ್ನಾನಂದ ಸ್ವಾಮೀಜಿ ಅಭಿಮತ ವ್ಯಕ್ತಪಡಿಸಿದರು.

ತಾಲ್ಲೂಕಿನ ಚನ್ನಸಮುದ್ರ ಗ್ರಾಮದಲ್ಲಿ ನಡೆದ ವಾಲ್ಮೀಕಿ ನಾಯಕ ಸಮಾಜದ ಅಧ್ಯಕ್ಷ ದಿವಂಗತ ಕೆ.ಟಿ.ರಂಗನಾಥ್ ರವರ ಶ್ರದ್ಧಾಂಜಲಿ ಸಭೆಯ ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ಅವರು, ವಾಲ್ಮೀಕಿ ಸಮಾಜದ ಅಧ್ಯಕ್ಷ ರಂಗನಾಥ್ ಒಬ್ಬ ಸಮಾಜದ ಸುಧಾರಕ, ಎಲ್ಲಾ ಸಮುದಾಯದ ಪ್ರೀತಿಗಳಿಸಿದ ಅವರು ಇಲ್ಲದ ನೋವು ಸಮಾಜಕ್ಕೆ ತುಂಬಲಾರದ ನಷ್ಟ. ಭಗವಂತನ ನಾಮಸ್ಮರಣೆ ಮಾಡಿ ಬದುಕು ಸಾರ್ಥಕಗೊಳಿಸಿಕೊಳ್ಳಬೇಕು. ಸಮಾಜಮುಖಿ ಸೇವೆ ಮಾಡಿ ಶರಣರ ಗುಣವನ್ನು ಮರಣದಲ್ಲಿ ನೋಡಬೇಕು ಎಂಬಂತೆ ನಾವು ಬದುಕಬೇಕು ಎಂದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಶಾಸಕ ಬಿ.ಜಿ ಗೋವಿಂದಪ್ಪ ಮಾತನಾಡಿ, ಮಾನವನಿಗೆ ಸಂಪತ್ತು ಎಷ್ಟಿದ್ದರೇನು? ಜೀವ ಇಲ್ಲದಿದ್ದರೆ ಎಲ್ಲವೂ ಶೂನ್ಯ. ಕೆ.ಟಿ.ರಂಗನಾಥ್ ಒಬ್ಬ ಅಜಾತಶತ್ರುವಾಗಿದ್ದರು. ಸಾವು ಯಾರನ್ನೂ ಬಿಡುವುದಿಲ್ಲ. ನಾಲಿಗೆ ಶುದ್ಧವಾಗಿದ್ದರೆ, ನಾಡೆಲ್ಲಾ ಶುದ್ಧ ಎಂಬಂತೆ ಪರಿಶುದ್ಧ ವ್ಯಕ್ತಿ, ಗ್ರಾಮದ ಬಗ್ಗೆ, ನಾಯಕ ಸಮಾಜದ ಅಪಾರ ಅಭಿಮಾನವಿದ್ದವರು, ಎಲ್ಲಾ ಸಮಾಜದ ಕಷ್ಟ–ಸುಖದಲ್ಲಿ ಭಾಗಿಯಾಗಿದ್ದವರು. ಮದಕರಿನಾಯಕ ಪುತ್ಥಳಿ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ. ರಾಜ್ಯದಾದ್ಯಂತ ಸುತ್ತಿ ರಾಜಧಾನಿಗೆ ಪಾದಯಾತ್ರೆ ಮಾಡಿ ಹೋರಾಟದ ಮೂಲಕ ವಾಲ್ಮೀಕಿ ಸಮುದಾಯಕ್ಕೆ ಮೀಸಲಾತಿ ಕೊಡಿಸಿದ ಕೀರ್ತಿ ವಾಲ್ಮೀಕಿ ಶ್ರೀ ಗಳಿಗೆ ಸಲ್ಲುತ್ತದೆ ಎಂದರು. ಕಾರ್ಯಕ್ರಮದಲ್ಲಿ ಟಿ.ಎ.ಪಿ.ಸಿ.ಎಂ.ಸಿ ಅಧ್ಯಕ್ಷ ಕಾರೇಹಳ್ಳಿ ಬಸವರಾಜ್, ಕಾಂಗ್ರೆಸ್ ಮುಖಂಡ ಆಗ್ರೋ ಶಿವಣ್ಣ, ವಾಲ್ಮೀಕಿ ಸಮಾಜದ ಮಾಜಿ ಅಧ್ಯಕ್ಷ ತುಂಬಿನಕೆರೆ ಬಸವರಾಜ್, ತರೀಕೆರೆ–ಅಜ್ಜಂಪುರ ನಾಯಕ ಸಮಾಜದ ಅಧ್ಯಕ್ಷ ಗೋವಿಂದಪ್ಪ, ಅಣ್ಣಪ್ಪ, ಕೆ.ಪಿ.ಸಿ.ಸಿ ಸದಸ್ಯ ಎಂ.ಪಿ.ಶಂಕರ್, ನಾಯಕ ಸಮಾಜದ ಉಪಾಧ್ಯಕ್ಷ ಗೌಡ್ರು ತಿಪ್ಪೇಸ್ವಾಮಿ, ಮುಖಂಡರಾದ ಹನುಮನಾಯ್ಕ, ತಿಮ್ಮಪ್ಪ, ತಿಪ್ಪಯ್ಯ, ಯುವರಾಜ್, ಜಯಣ್ಣ, ಪರಮ್ಮ, ಶೇಖರಪ್ಪ, ಕೊಂಡಜ್ಜಿ ನಾಗರಾಜ್, ವೆಂಗಳಾಪುರ ರಂಗನಾಥ್, ಮಹೇಶ್, ಶಿಕ್ಷಕ ತಿಮ್ಮಪ್ಪ, ಉಪನ್ಯಾಸಕ ಮೈಲಾರಪ್ಪ, ಗುರುಸಿದ್ದಪ್ಪ, ಕೆಂಚಪ್ಪ, ಶಾಸಕರ ಆಪ್ತ ಕಾರ್ಯದರ್ಶಿ ರಂಗನಾಥ್, ರೋಪ್ಪ ಹನುಮಂತಪ್ಪ, ಮಂಜುನಾಥ್, ಕೆ.ಟಿ.ತಿಮ್ಮಪ್ಪ, ಲಕ್ಮಣ್, ಪ್ರಸನ್ನ ಮತ್ತು ಜಯಣ್ಣ ಸೇರಿದಂತೆ ಗ್ರಾಮಸ್ಥರು ಹಾಗೂ ವಾಲ್ಮೀಕಿ ಸಮಾಜದ ಬಂಧುಗಳು.

## ಆಪರೇಷನ್ ಸಿಂಧೂರ ಕಾರ್ಯಕ್ರಮ ದೇಶದ ಹೆಮ್ಮೆಯ ವಿಷಯ: ಸಂಸದ ಪಿ.ಸಿ.ಮೋಹನ್

» **ಚಳ್ಳಕೆರೆ**

ಕಳೆದ ತಿಂಗಳು ಕಾಶ್ಮೀರದಲ್ಲಿ ನಡೆದ ಪಹಲ್ಗಾಮ್ ದುರಂತಕ್ಕೆ ಸಂಬಂಧಿಸಿದಂತೆ ಭಾರತೀಯ ಸೇನೆ ಉಗ್ರಗಾಮಿಗಳನ್ನು ಸದೆಬಡಿದಿದ್ದಲ್ಲದೆ, ಅಡಗಿದ್ದ ಉಗ್ರರನ್ನು ಹುಡುಕಿ ನಿರ್ನಾಮ ಮಾಡುತ್ತಿದೆ. ಆಪರೇಷನ್ ಸಿಂಧೂರ ಕಾರ್ಯಕ್ರಮ ದೇಶದ ಹೆಮ್ಮೆಯ ವಿಷಯ. ಆದರೂ ಕಾಂಗ್ರೆಸ್ ಪಕ್ಷ ಈ ಕಾರ್ಯವನ್ನು ಅವಮಾನಿಸುವ ರೀತಿಯಲ್ಲಿ ವರ್ತಿಸುತ್ತಿರುವುದು ಸರಿಯಲ್ಲವೆಂದು ಬೆಂಗಳೂರು ಕೇಂದ್ರಿಯ ಸಂಸದ, ಬಲಿಜ ಸಮಾಜದ ಹಿರಿಯ ಮುಖಂಡ ಪಿ.ಸಿ.ಮೋಹನ್ ತಿಳಿಸಿದರು.

ಅವರು, ಭಾನುವಾರ ಖಾಸಗಿ ಕಾರ್ಯನಿಮಿತ್ತ ಚಳ್ಳಕೆರೆಗೆ ಆಗಮಿಸಿದ ಸಂದರ್ಭದಲ್ಲಿ ಬಲಿಜ ಸಮಾಜದ ಹಿರಿಯ ಮುಖಂಡ, ಶಿವಮೊಗ್ಗ ಹಾಲುಒಕ್ಕೂಟದ ಜಿಲ್ಲಾ ನಿರ್ದೇಶಕ, ವೆಂಕಟಸಾಯಿ ಸೇವಾಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿಯವರ ಕಚೇರಿಗೆ ಭೇಟಿ ನೀಡಿ ಪ್ರಸ್ತುತ ವಿದ್ಯಮಾನಗಳ ಬಗ್ಗೆ ಚರ್ಚೆ ನಡೆಸಿದರು. ಸಾಯಿಬಾಬಾಮಂದಿರದ ಈ ಭಾಗದ ಸಾವಿರಾರು ಭಕ್ತರಿಗೆ ಶ್ರದ್ಧಾ ಕೇಂದ್ರವಾಗಿರುವ ವಿಚಾರ ಸಂತಸ ತಂದಿದೆ ಎಂದರು. ರಾಜ್ಯದಲ್ಲಿ ಬಲಿಜ ಸಮಾಜವನ್ನು ಬಲವಾಗಿ ಸಂಘಟಿಸುವುದಲ್ಲದೆ, ಸರ್ಕಾರದಿಂದ ಇನ್ನೂ ಹೆಚ್ಚಿನ ನೆರವು ಪಡೆದು ಸಮಾಜದ ಅಭಿವೃದ್ಧಿಗೆ ಕಾರ್ಯನಿರ್ವಹಿಸಬೇಕಿದೆ. ಸಂಜೀವಮೂರ್ತಿ ಮತ್ತು ತಂಡ ಈ ಕಾರ್ಯಕ್ಕೆ ಸಹಕಾರ ನೀಡಬೇಕೆಂದರು.



ವೆಂಕಟಸಾಯಿ ಸೇವಾಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಮಾತನಾಡಿ, ಸಮಾಜದ ಮುಖಂಡರು, ಲೋಕಸಭಾ ಸದಸ್ಯರಾದ ಪಿ.ಸಿ.ಮೋಹನ್ ಹಲವಾರು ಬಾರಿ ಚಳ್ಳಕೆರೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಾಯಿಬಾಬಾ ಮಂದಿರದ ವಿದ್ಯಾಮಾನಗಳ ಜೊತೆಗೆ ಜನಾಂಗದ ಅಭಿವೃದ್ಧಿಯ ಬಗ್ಗೆಯೂ ಸಹ ಚಿಂತನೆ ನಡೆಸುತ್ತಾರೆ. ನಾಲ್ಕು ಬಾರಿ ಬೆಂಗಳೂರು ಕೇಂದ್ರದ ಸಂಸದರಾಗಿ ಆಯ್ಕೆಯಾಗಿದ್ದಾರೆ. ಬಲಿಜ ಸಮಾಜವೂ ಸೇರಿದಂತೆ ಎಲ್ಲಾ ಸಮಾಜಗಳ ಅಭಿವೃದ್ಧಿಗೆ ಸಹಕಾರ ನೀಡುತ್ತಾ ಬಂದಿದ್ದಾರೆಂದರು.

ಟ್ರಸ್ಟ್‌ನ ನಿರ್ದೇಶಕರಾದ ಬಿ.ಸಿ.ವೆಂಕಟೇಶ್, ಬಿ.ವಿ.ಚಿದಾನಂದಮೂರ್ತಿ, ಕಾರ್ತಿಕ್‌ಎಸ್. ಮೂರ್ತಿ, ಬಿ.ಸಿ.ಸತೀಶ್‌ಕುಮಾರ್, ನಿರಂಜನಮೂರ್ತಿ, ಲಕ್ಷ್ಮಣ್, ಸುರೇಶ್‌ಬಾಬು, ಪುಷ್ಪ, ರಶ್ಮಿ, ಮುಂತಾದವರು ಉಪಸ್ಥಿತರಿದ್ದರು.

## ಶಿವಮೊಗ್ಗ ಹಾಲುಒಕ್ಕೂಟದ ಪ್ರಗತಿಗೆ ಮಾರಾಟಗಾರರ ಪ್ರೋತ್ಸಾಹ ಅತಿಮುಖ್ಯ: ಸಂಜೀವಮೂರ್ತಿ




» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಕರ್ನಾಟಕ ಶಿವಮೊಗ್ಗ ಹಾಲುಒಕ್ಕೂಟದ ಉತ್ಪನ್ನಗಳನ್ನು ಮಾರಾಟ ಮಾಡುವ ಮಾರಾಟಗಾರರು ಹಲವಾರು ಸಮಸ್ಯೆಗಳ ನಡುವೆಯೂ ಒಕ್ಕೂಟದ ಅಭಿವೃದ್ಧಿಗೆ ಕಾರ್ಯನಿರ್ವಹಿಸುತ್ತಾ ಬಂದಿದ್ದಾರೆ. ನಿಮ್ಮ ಸಮಸ್ಯೆಗಳಿಗೆ ಹಾಲುಒಕ್ಕೂಟ ಸಕರಾತ್ಮವಾಗಿ ಸ್ಪಂದಿಸುವ ನಿರ್ಧಾರ ಕೈಗೊಂಡಿದೆ ಎಂದು ಶಿವಮೊಗ್ಗ ಹಾಲುಒಕ್ಕೂಟದ ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ತಿಳಿಸಿದರು. ಅವರು, ಭಾನುವಾರ ಬೆಂಗಳೂರು ರಸ್ತೆಯ ಉಪಕಚೇರಿ ಕುರಿಯನ್ ಸಭಾಂಗಣದಲ್ಲಿ ಮಾರಾಟಗಾರರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಎಲ್ಲಾ ಮಾರಾಟಗಾರರಿಗೆ ಹಾಲು ಒಕ್ಕೂಟದಿಂದ ಉಚಿತವಾಗಿ ಕ್ಯಾರಿಬ್ಯಾಗ್, ರೈನ್‌ಕೋಟ್, ಜರ್ಕಿನ್, ಟೀಶರ್ಟ್‌ಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಮಾರುಕಟ್ಟೆ ಅಧಿಕಾರಿ ಇರ್ಫಾನ್, ತನ್ವೀರ್, ಎಸ್.ಅಭಿಷೇಕ್, ವಿತರಕರಾದ ಯನ್ನಪ್ಪಬಾಬು, ಗೋವಿಂದರಾಜು, ದಿವಾಕರ, ದಯಾನಂದ, ಸುಶೀಲಾ, ಆನಂದ, ಗೀತಾ, ಬೋರಣ್ಣ ಮುಂತಾದವರು ಭಾಗವಹಿಸಿದ್ದರು.


**ಪ್ರಮುಖ ಸುದ್ದಿ**

# ಕ್ಷೇತ್ರದಲ್ಲಿ 450 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾರ್ಯ

» **ಹೊಳಲ್ಕೆರೆ**

ಸಾರ್ವಜನಿಕರ ಬದುಕು ಏನೆಂದು ಅರ್ಥ ಮಾಡಿಕೊಂಡು ಕ್ಷೇತ್ರದ ಅಭಿವೃದ್ಧಿಗೆ ಹಗಲು–ರಾತ್ರಿ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆಂದು ಶಾಸಕ ಡಾ.ಎಂ. ಚಂದ್ರಪ್ಪ ತಿಳಿಸಿದರು.

ಮತಿಗಟ್ಟ ಗ್ರಾಮದಲ್ಲಿ ಮತಿಘಟ್ಟದಿಂದ ಚಿತ್ರದುರ್ಗ ತಾಲ್ಲೂಕು ಗಡಿವರೆಗೂ 34 ಕೋಟಿ ರೂ.ವೆಚ್ಚದಲ್ಲಿ 13.10 ಕಿ.ಮೀ. ಉದ್ದದ ನೂತನ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿಗೆ ಭಾನುವಾರ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು. 2 ಬಾರಿಗೆ ಭರಮಸಾಗರದಿಂದ ಚುನಾವಣೆಗೆ ಸ್ಪರ್ಧಿಸಿದಾಗ ಒಮ್ಮೆ ಗೆದ್ದವರು 2 ನೇ ಸಲ ಗೆಲ್ಲುವುದಿಲ್ಲವೆಂದು ಜನ ಮಾತಾಡಿಕೊಳ್ಳುತ್ತಿದ್ದರು. 386 ಹಳ್ಳಿಗಳಲ್ಲಿ ರಸ್ತೆ ಮಾಡಿಸಿದ್ದರಿಂದ ರಸ್ತೆ ರಾಜ ಎನ್ನುವ ಬಿರುದು ನೀಡಿ ಯುವಕರು ನನ್ನನ್ನು ಹೆಗಲ



ಮೇಲೆ ಕೂರಿಸಿಕೊಂಡು ಮೆರವಣಿಗೆ ಮಾಡಿ ಎರಡನೆ ಬಾರಿಗೂ ಗೆಲ್ಲಿಸಿದರು. ಐದು ಜಿಲ್ಲೆಯಿಂದ ಜನತಾದಳದಿಂದ ನಾನೊಬ್ಬನೆ ಗೆದ್ದಿದ್ದು. ಅಭಿವೃದ್ಧಿ ಕೆಲಸಗಳನ್ನು ಮಾಡಿದರೆ ಜನ ಎಂದಿಗೂ ಕೈಬಿಡುವುದಿಲ್ಲ. ಅಧಿಕಾರ ಶಾಶ್ವತವಲ್ಲ. ಇರುವಷ್ಟು ದಿನ ಸಾರ್ವಜನಿಕರ ಋಣ ತೀರಿಸಬೇಕೆಂಬ ಅರಿವಿಟ್ಟುಕೊಂಡು ಕೆಲಸ ಮಾಡುತ್ತಿದ್ದೇನೆಂದರು. ವಿಧಾನಸೌಧ ಕಟ್ಟಲು ಕೇವಲ 90 ಲಕ್ಷ ರೂ.ಗಳು ಖರ್ಚಾಗಿದೆ. ಮತಿಘಟ್ಟದಿಂದ ಚಿತ್ರದುರ್ಗ ತಾಲ್ಲೂಕು ಗಡಿವರೆಗೂ 34 ಕೋಟಿ ರೂ. ವೆಚ್ಚದಲ್ಲಿ ಸಿ.ಸಿ.ರಸ್ತೆ ನಿರ್ಮಾಣವಾಗುತ್ತಿದೆ. ಇನ್ನು ಮೂರು ತಲೆಮಾರುಗಳಾದರೂ ರಸ್ತೆ ಕಿತ್ತು ಹೋಗುವುದಿಲ್ಲ. ಅಷ್ಟು ಗಟ್ಟಿಮುಟ್ಟಾಗಿರುತ್ತದೆ. ತಾಲ್ಲೂಕಿನಾದ್ಯಂತ 493 ಹಳ್ಳಿಗಳಲ್ಲಿ ಎಲ್ಲೆಲ್ಲಿ ಏನು ಅಭಿವೃದ್ಧಿ ಕೆಲಸ ಮಾಡಿದರೆ ಜನರಿಗೆ ಒಳ್ಳೆಯದಾಗುತ್ತದೆಂಬ ಜ್ಞಾನವಿಟ್ಟುಕೊಂಡು ಅಭಿವೃದ್ಧಿ ಕಾಮಗಾರಿಗಳನ್ನು ಮಾಡಿಸುತ್ತಿದ್ದೇನೆ. ಮತದಾರರು ಏನು ಬೇಕು ಅಂತ ಕೇಳಿದರೆ ಸ್ಥಳದಲ್ಲೇ ಹಣ ಮಂಜೂರು ಮಾಡುತ್ತೇನೆ. ಸರ್ಕಾರ ಯಾವುದಿದೆ ಎನ್ನುವುದು ಮುಖ್ಯವಲ್ಲ. ಅನುದಾನ ತರುವ ತಾಕತ್ತಿದೆ ಎಂದರು.

450 ಕೋಟಿ ರೂ.ಗಳ ಅಭಿವೃದ್ಧಿ ಕೆಲಸಗಳು ಕ್ಷೇತ್ರದಲ್ಲಿ ನಡೆಯುತ್ತಿದೆ. ಒಂದೊಂದು ರೋಡಿಗೆ ಮೂವತ್ತರಿಂದ ನಲವತ್ತು ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ.

## ಫಾಸ್ಟ್ ನ್ಯೂಸ್

### ಸಾಣೀಕೆರೆಯ ವೇದಪಿಯು ಕಾಲೇಜಿಗೆ ಸಿಇಟಿಯಲ್ಲಿ 3 ರ್‍ಯಾಂಕ್: ವಿದ್ಯಾರ್ಥಿಗಳ ಸಾಧನೆಗೆ ಪ್ರಶಂಸೆ

» ಚಳ್ಳಕೆರೆ







ರಾಜ್ಯದ ವೃತ್ತಿಪರ ಕೋರ್ಸ್‌ಗಳಿಗೆ ನಡೆದ ಸಿಇಟಿ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು,ತಾಲ್ಲೂಕಿನ ಸಾಣಿಕೆರೆಯ ವೇದ ಪಿಯು ಕಾಲೇಜಿನ ವಿದ್ಯಾರ್ಥಿಗಳು ಇಂಜಿನಿಯರಿಂಗ್ ಮತ್ತು ಕೃಷಿ ವಿಭಾಗದಲ್ಲಿ ಒಟ್ಟು ಮೂರು ರ್‍ಯಾಂಕ್ ಪಡೆಯುವ ಮೂಲಕ ಕಾಲೇಜಿಗೆ ಕೀರ್ತಿತಂದಿದ್ದಾರೆಂದು ವಶಿಷ್ಠ ಶೈಕ್ಷಣಿಕ ಅಭಿವೃದ್ಧಿ ಸಂಸ್ಥೆ ಅಧ್ಯಕ್ಷ ಡಿ.ಟಿ.ರವೀಂದ್ರ ತಿಳಿಸಿದ್ದು,ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳು ಹಾಗೂ ಫಲಿತಾಂಶಕ್ಕೆ ಕಾರಣಕರ್ತರಾದ ಬೋಧಕ ವರ್ಗವನ್ನು ಅಭಿನಂದಿಸಿದ್ಧಾರೆ. ಕಾಲೇಜಿನ ಪ್ರಾಂಶುಪಾಲ ಸಂದೀಪ್ ಮಾಹಿತಿ ನೀಡಿ, ಕಾಲೇಜಿನ ಎಸ್.ವೈಭವನ್ ಒಟ್ಟು ಮೂರು ವಿಭಾಗದಲ್ಲಿ ರ್‍ಯಾಂಕ್ ಪಡೆದಿರುತ್ತಾರೆ. ಬಿಎಸ್ಸಿ ಎಜಿನಲ್ಲಿ 11 ರ್‍ಯಾಂಕ್, ವೆಟರ್ನರಿ ವಿಭಾಗದಲ್ಲಿ 43ನೇ, ಇಂಜಿನಿಯರಿಂಗ್ ವಿಭಾಗದಲ್ಲಿ 6012ನೇ ರ್‍ಯಾಂಕ್ ಪಡೆದಿದ್ದಾರೆ. ಕೆ.ಆರ್.ಜ್ಞಾನಸಾಗರ ಇಂಜಿನಿಯರಿಂಗ್ ವಿಭಾಗದಲ್ಲಿ 6015ನೇ ರ್‍ಯಾಂಕ್ ಗಳಿಸಿದರೆ, ಎಚ್.ಭೂಮಿಕ 8381ನೇ ರ್‍ಯಾಂಕ್ ಪಡೆದಿದ್ಧಾರೆ. ಸಂಸ್ಥೆಯ ಕಾರ್ಯದರ್ಶಿ ಡಿ.ಆರ್.ಕಿರಣ್ ಮಾತನಾಡಿ, ಕಳೆದ 10 ವರ್ಷಗಳಿಂದ ನಮ್ಮ ಸಂಸ್ಥೆ ಶೈಕ್ಷಣಿಕವಾಗಿ ಉತ್ತಮ ಅಭಿವೃದ್ದಿಯತ್ತ ಹೆಜ್ಜೆ ಇಡುತ್ತಿದೆ. ವಿಶೇಷವಾಗಿ ಈ ಬಾರಿ ಸಿಇಟಿ ಪರೀಕ್ಷೆಯಲ್ಲಿ ಮೂರು ರ್‍ಯಾಂಕ್‌ನ್ನು ನಮ್ಮ ವಿದ್ಯಾರ್ಥಿಗಳು ಪಡೆಯುವ ಮೂಲಕ ವಿದ್ಯಾಸಂಸ್ಥೆಯ ಗೌರವವನ್ನು ಹೆಚ್ಚಿಸಿದ್ಧಾರೆ. ಎಲ್ಲಾ ವಿದ್ಯಾರ್ಥಿಗಳನ್ನು ಸಂಸ್ಥೆ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು. ಪ್ರಾಂಶುಪಾಲ ಸಂದೀಪ್ ಹಾಗೂ ಉಪನ್ಯಾಸಕರು ಉಪಸ್ಥಿತರಿದ್ದರು.

### ಕ್ಷೇತ್ರದಲ್ಲಿ 450 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾರ್ಯ: ಚಂದ್ರಪ್ಪ

» ಮೊದಲ ಪುಟದಿಂದ

ಐದನೆ ಬಾರಿಗೆ ಶಾಸಕನಾಗಿರುವ ನನಗೆ ಸಾರ್ವಜನಿಕರ ಬದುಕು ಏನೆಂದು ಗೊತ್ತಾಗಿದೆ. ಹತ್ತು ಕೋಟಿ ರೂ.ವೆಚ್ಚದಲ್ಲಿ ಆಸ್ಪತ್ರೆ ಕಟ್ಟಿಸಿದ್ದೇನೆ. ಯಾರು ಕಷ್ಟ-ಸುಖಕ್ಕೆ ಆಗುತ್ತಾರೆ. ಚುನಾವಣೆಯಲ್ಲಿ ಯಾರಿಗೆ ಮತ ನೀಡಿದರೆ ಒಳ್ಳೆಯದು ಎನ್ನುವುದನ್ನು ತಿಳಿದುಕೊಂಡು ಮತ ಚಲಾಯಿಸಿ. ಜನರ ಹೆಗಲ ಮೇಲೆ ಕೈಹಾಕಿ ಗಿಲಿಟ್ ಮಾಡುವ ರಾಜಕಾರಣಿ ನಾನಲ್ಲ. ಸಮುದಾಯ ಭವನ, ಹೈಸ್ಕೂಲ್, ಪಿ.ಯು.ಕಾಲೇಜು, ಡಿಗ್ರಿ ಕಾಲೇಜು, ಮುನ್ಸಿಪಲ್ ಕಟ್ಟಡ ಕಟ್ಟಿಸಿದ್ದೇನೆ. ಉಪಕಾರ ಮಾಡಿದವರನ್ನು ಮರೆಯಬಾರದೆಂದು ಎಲ್ಲಾ ಕಡೆ ಕೆಲಸ ಮಾಡಿಸುತ್ತಿದ್ದೇನೆ. 367 ಕೋಟಿ ರೂ.ಗಳನ್ನು ಖರ್ಚು ಮಾಡಿ ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ಪ್ರತಿ ಮನೆ ಮನೆಗೂ ಶುದ್ದ ಕುಡಿಯುವ ನೀರು ಕೊಡುತ್ತೇನೆ. ಭದ್ರಾ ಪ್ರಾಜೆಕ್ಟ್‌ನಿಂದ ನೀರು ತಂದು ಇನ್ನು ಆರು ತಿಂಗಳೊಳಗೆ ಎಲ್ಲಾ ಕೆರೆಗಳಿಗೂ ನೀರು ತುಂಬಿಸಲಾಗುವುದು. ರೈತರು ಅಡಿಕೆ ತೋಟಗಳನ್ನು ಮಾಡಿಕೊಳ್ಳಬೇಕು. ಸರ್ಕಾರಿ ಶಾಲೆಗೆ ಬರುವ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಬಾರದೆಂದು ಸ್ವಂತ ಖರ್ಚಿನಿಂದ ಬಸ್‌ಗಳನ್ನು ಬಿಟ್ಟಿದ್ದೇನೆ. ಡ್ರೈವರ್, ಕಂಡಕ್ಟರ್‌ಗೆ ಸಂಬಳ ಕೊಡುತ್ತೇನೆ. ರಾಜ್ಯದಲ್ಲಿ ಯಾವ ಶಾಸಕನು ಇಂತಹ ಕೆಲಸ ಮಾಡಿಲ್ಲ ಎಂದು ಹೇಳಿದರು.

ಅಂಕಳಪ್ಪ, ವೈ.ಪರಮೇಶ್ವರಪ್ಪ, ಪ್ರವೀಣ್, ಜಯಪ್ಪ, ನಾಗಲಿಂಗಪ್ಪ, ಎಲರಾಜಪ್ಪ, ರಾಘಣ್ಣ, ಎಂ.ದಿವಾಕರ್, ನಾಗಣ್ಣ, ಗುತ್ತಿಗೆದಾರ ಸಿದ್ದೇಶ್ ಹಾಗೂ ಗ್ರಾಮದ ಪ್ರಮುಖರು ಈ ಸಂದರ್ಭದಲ್ಲಿ ಹಾಜರಿದ್ದರು.

### ಜೇನು ಕೃಷಿ ಕಾರ್ಯಾಗಾರ

**ಚಿತ್ರದುರ್ಗ:** ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಮೇ.26 ಮತ್ತು 27ರಂದು ಬೆಳಿಗ್ಗೆ 10ಕ್ಕೆ ಜಿಲ್ಲೆಯ ರೈತರಿಗೆ ಜೇನು ಕೃಷಿಯ ಕುರಿತು ಎರಡು ದಿನದ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಜೇನು ಕೃಷಿ ತಜ್ಞರು ಹಾಗೂ ನಿವೃತ್ತ ಸಹಾಯಕ ನಿರ್ದೇಶಕ ಮೇಟಿಕುರ್ಕೆಯ ಡಾ.ಶಾಂತವೀರಯ್ಯ ಅವರು ಜೇನು ಸಾಕಾಣಿಕೆಯ ಸಮಗ್ರ ಮಾಹಿತಿ ಬಗ್ಗೆ ವಿಷಯ ಮಂಡನೆ ಹಾಗೂ ಪ್ರಾತ್ಯಕ್ಷಿಕೆ ನೀಡುವರು. ಆಸಕ್ತ 40 ಜನ ರೈತಭಾಂದವರು ತರಬೇತಿಯಲ್ಲಿ ಭಾಗವಹಿಸಲು 8277931058 ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು. ಮೊದಲು ನೋಂದಾವಣೆ ಮಾಡಿಕೊಂಡ 40 ರೈತಭಾಂದವರು ಫ್ರೂಟ್ಸ್ ಐಡಿ (ಎಫ್‌ಐಡಿ) ಅಥವಾ ಆಧಾರ್ ಕಾರ್ಡ್‌ನೊಂದಿಗೆ ತರಬೇತಿಗೆ ಹಾಜರಾಗಬೇಕು ಎಂದು ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಕೋರಿದ್ದಾರೆ.

# ಬಸವಣ್ಣ ಆಚಾರ, ವಿಚಾರ ವಿಶಾಲವಾದುದು

» ಹೊಳಲ್ಕೆರೆ



ಮೇಲು-ಕೀಳು, ಬಡವ-ಬಲ್ಲಿದ, ಸ್ತ್ರೀ-ಪುರುಷ ಎನ್ನುವ ಅಸಮಾನತೆಯಿಲ್ಲದ ಹನ್ನೆರಡನೆ ಶತಮಾನದ ಕ್ರಾಂತಿಕಾರಿ ಬಸವಣ್ಣನವರ ಆಚಾರ, ವಿಚಾರ ವಿಶಾಲವಾದುದು. ಯಾವುದೇ ಒಂದು ಜನಾಂಗಕ್ಕೆ ಸೀಮಿತವಲ್ಲ. ಇಡಿ ಮನುಕುಲಕ್ಕೆ ಸಮಾತನೆಯ ಸಂದೇಶ ಸಾರಿದ ಹರಿಕಾರ ಎಂದು ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ರಾಜ್ಯಾಧ್ಯಕ್ಷ ಶಂಕರ್ ಮಹದೇವ ಬಿದರಿ ಹೇಳಿದರು.

ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಹೊಳಲ್ಕೆರೆ ತಾಲ್ಲೂಕು ಘಟಕ, ವೀರಶೈವ ಲಿಂಗಾಯಿತ ಸಮಾಜ, ವೀರಶೈವ ಲಿಂಗಾಯಿತ ನೌಕರರ ಸಂಘದ ಸಹಯೋಗದೊಂದಿಗೆ ಪಟ್ಟಣದ ಸಂವಿಧಾನ ಸೌಧದಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಜಗಜ್ಯೋತಿ ಬಸವೇಶ್ವರರ ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ವೀರಶೈವ ಲಿಂಗಾಯಿತರು ಪರಸ್ಪರ ದ್ವೇಷ, ಅಸೂಯೆ, ಭಿನ್ನಾಭಿಪ್ರಾಯಗಳನ್ನು ಬಿಟ್ಟು ಒಂದಾಗಿ ಸೇರಿರುವುದು ನನಗಂತೂ ಅತ್ಯಂತ ಸಂತೋಷವಾಗಿದೆ. ಹೊಳಲ್ಕೆರೆಯಲ್ಲಿ ಅತ್ಯಂತ ವಿಜೃಂಭಣೆಯಿಂದ ಬಸವಣ್ಣನವರ ಜಯಂತಿ ಆಚರಿಸಿ ಕೇವಲ ಕರ್ನಾಟಕ ರಾಜ್ಯಕ್ಕಷ್ಟೆ ಅಲ್ಲ. ಇಡಿ ದೇಶಕ್ಕೆ ಮಾದರಿಯಾಗಿದ್ದೀರ. ಎಲ್ಲಾ ಕಡೆ ಇದೆ ಮನೋಭಾವ ಮೂಡಿದಾಗ ವೀರಶೈವರು ನೆಮ್ಮದಿಯಿಂದ ತಲೆ ಎತ್ತಿ ಜೀವನ ಮಾಡಬಹುದು ಎಂದರು.

ಬಡವ-ಬಲ್ಲಿದ, ಕಪ್ಪು-ಬಿಳುಪು ಎನ್ನುವ ವರ್ಣಬೇಧ ಸರಿಯಲ್ಲ. ಸ್ತ್ರೀ-ಪುರಷರು ಸಮಾನರು ಎನ್ನುವ ಸಂದೇಶವನ್ನು ಇಡಿ ವಿಶ್ವಕ್ಕೆ ಕೊಟ್ಟವರು ಬಸವಣ್ಣ. ಅದಕ್ಕಾಗಿ ಎಲ್ಲಿಯೂ ಅಸ್ಪೃಶ್ಯತೆಯನ್ನು ಆಚರಿಸಬಾರದು. ಕರ್ನಾಟಕವನ್ನು ಅಸ್ಪೃಶ್ಯತೆಯಿಂದ ಮುಕ್ತಗೊಳಿಸಿದಾಗ ಮಾತ್ರ ಬಸವಣ್ಣನವರಿಗೆ ನಿಜವಾಗಿಯೂ ಗೌರವ ನೀಡಿದಂತಾಗುತ್ತದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ ಅಪ್ಪಿತಪ್ಪಿಯೂ ಒಂದೆ ಒಂದು ಅಸ್ಪೃಶ್ಯತೆ ಪ್ರಕರಣವಾಗಬಾರದು. ಪುರುಷರಂತೆ ಮಹಿಳೆಯರನ್ನು ಗೌರವದಿಂದ ಕಾಣಬೇಕು. ಎಲ್ಲಿಯೂ ದೌರ್ಜನ್ಯ, ದಬ್ಬಾಳಿಕೆ, ಅತ್ಯಾಚಾರಗಳು ನಡೆಯಬಾರದು. ಬಸವಣ್ಣನವರು ಹೇಳಿರುವಂತೆ ಕಾಯಕವೆ ಕೈಲಾಸ ಎನ್ನುವ ತತ್ವದಡಿಯಲ್ಲಿ ಜೀವಿಸುತ್ತಿರುವ ವೀರಶೈವ ಲಿಂಗಾಯಿತರು ಪ್ರಾಮಾಣಿಕ, ಪರಿಶುದ್ದವಾದ ಕಾಯಕವನ್ನು ನಂಬಿರುವವರು. ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿಯೂ ವೀರಶೈವ ಲಿಂಗಾಯಿತರು ಸಣ್ಣಪುಟ್ಟ ಅಸೂಯೆಗಳನ್ನು ಮನಸ್ಸಿನಲ್ಲಿಟ್ಟುಕೊಳ್ಳದೆ ಒಗ್ಗಟ್ಟಾಗಿರಬೇಕು. ಆಗ ಮಾತ್ರ ಬಸವಣ್ಣನವರ ತತ್ವಗಳಿಗೆ ನಿಜವಾದ ಅರ್ಥ ಸಿಗುತ್ತದೆ ಎಂದು ಹೇಳಿದರು.

ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ ರಾಜ್ಯದಲ್ಲಿ ಇತಿಹಾಸ ಸೃಷ್ಟಿಸಿರುವ ಬಹುದೊಡ್ಡ ಸಮಾಜ ಯಾವುದಾದರೂ ಇದ್ದರೆ ಅದು ವೀರಶೈವ ಲಿಂಗಾಯಿತರು. ನನ್ನ ಕ್ಷೇತ್ರದಲ್ಲಿ ವೀರಶೈವ ಲಿಂಗಾಯಿತರು ಬೇರೆ ಜನಾಂಗದವರೊಟ್ಟಿಗೆ ಒಂದೇ ತಾಯಿ ಮಕ್ಕಳಂತೆ ಅನ್ಯೋನ್ಯತೆಯಿಂದ ಬದುಕುತ್ತಿದ್ದಾರೆ. ಸಮಾಜದ ಕಟ್ಟ ಕಡೆಯ ವ್ಯಕ್ತಿಗೆ ಕೈಲಾದಷ್ಟು ಸಹಾಯ ಮಾಡುವ ವೀರಶೈವ ಜನಾಂಗ ಎಂತಹುದೇ ಸಂದರ್ಭದಲ್ಲಿಯೂ ನನ್ನನ್ನು ಕೈಬಿಟ್ಟಿಲ್ಲ. ನಾನು ಕೂಡ ಕಡೆಯ ಉಸಿರಿರುವತನಕ ನಿರ್ವಂಚನೆಯಿಂದ ನಿಮ್ಮಗಳ ಸೇವೆ ಮಾಡುತ್ತೇನೆಂದು ಭರವಸೆ ನೀಡಿದರು.

ಬಸವಣ್ಣನವರು ಕೇವಲ ವೀರಶೈವ ಲಿಂಗಾಯಿತರಿಗಷ್ಟೆ ಅಲ್ಲ. ಇಡಿ ವಿಶ್ವಕ್ಕೆ ಸಮಾನತೆಯ ಸಂದೇಶ ಸಾರಿ ವಿಶ್ವ ಮಾನವರೆನಿಸಿಕೊಂಡಿದ್ದಾರೆ. ಕಾಯಕಕ್ಕೆ ಹೆಚ್ಚಿನ ಒತ್ತು ಕೊಟ್ಟಿದ್ದ ಜಗಜ್ಯೋತಿ ಬಸವೇಶ್ವರರು ಹನ್ನೆರಡನೆ ಶತಮಾನದಲ್ಲಿಯೇ ಅನುಭವ ಮಂಟಪದಲ್ಲಿ ಮಹಿಳೆಯರಿಗೆ ಸಮಾನತೆ ನೀಡಿದವರು. ಅಂತಹ ಕ್ರಾಂತಿಕಾರಿ ಪುರುಷನ ಪರಿಕಲ್ಪನೆ ಮೇಲೆ ಇಂದಿನ ಪಾರ್ಲಿಮೆಂಟ್ ನಿಂತಿದೆ. ವಿಶ್ವದಲ್ಲಿಯೇ ಬಸವಣ್ಣನವರ ಅನುಯಾಯಿಗಳಿದ್ದಾರೆ.

31 ವರ್ಷಗಳ ಹಿಂದೆ ನಾನು ರಾಜಕಾರಣಕ್ಕೆ ಬಂದಾಗ ಉಪಕಾರ ಮಾಡಿದ ಬಹುದೊಡ್ಡ ಸಮಾಜ ನಿಮ್ಮದು. ಬಸವಣ್ಣನವರ ತತ್ವ ಸಿದ್ದಾಂತಗಳಂತೆ ಕ್ಷೇತ್ರದ ಅಭಿವೃದ್ದಿಗೆ ಹಗಲು-ರಾತ್ರಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ. ಶಂಕರ ಬಿದರಿರವರು ಮೂರುವರೆ ವರ್ಷಗಳ ಕಾಲ ಚಿತ್ರದುರ್ಗದಲ್ಲಿ ದಕ್ಷ ಪೊಲೀಸ್ ಅಧಿಕಾರಿಯಾಗಿದ್ದರು.

ಕೆಚ್ಚದೆಯವರಾದ ಇವರು ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾಗಿ ಸೇವೆ ಸಲ್ಲಿಸಿರುವುದು ಕೂಡ ನನಗೆ ಅತ್ಯಂತ ಸಂತೋಷವನ್ನುಂಟು ಮಾಡಿದೆ. ಬಸವಣ್ಣನವರ ಆಶಯದಂತೆ ವೀರಶೈವ ಲಿಂಗಾಯಿತರು ಜೀವಿಸಬೇಕಾಗಿದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಕರೆ ನೀಡಿದರು.ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕ ಮಾಧುರಿ ಗಿರೀಶ್ ಪ್ರಾಸ್ತಾವಿಕವಾಗಿ ಮಾತನಾಡಿದರು.ಅಖಿಲಭಾರತವೀರಶೈವ ಲಿಂಗಾಯಿತ ಮಹಾಸಭಾ ರಾಷ್ಟ್ರೀಯ ಕಾರ್ಯದರ್ಶಿ ರೇಣುಕಾ ಪ್ರಸನ್ನ, ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್, ಮಾಜಿ ಶಾಸಕ ಪಿ.ರಮೇಶ್‌ಪುರಸಭೆ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್, ಉಪಾಧ್ಯಕ್ಷೆ ನಾಗರತ್ನ ವೇದಮೂರ್ತಿ, ವೀಣ ಕಾಶಪ್ಪನವರ್, ಹನುಮಲಿ ಷಣ್ಮುಖಪ್ಪ, ಶಶಿಕಲಾ ಮೂರ್ತಿ, ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಜಿಲ್ಲಾಧ್ಯಕ್ಷ ಮಹಡಿ ಶಿವಮೂರ್ತಿ, ಮಹಸಭಾದ ತಾಲ್ಲೂಕು ಅಧ್ಯಕ್ಷ ಪ್ರಭಾಕರ್ ಮಾಳಿಗೆ, ಹನುಮಂತಪ್ಪ, ಎ.ಕೆ.ರುದ್ರಪ್ಪ, ಜಿ.ಬಿ.ಶೇಖರ್, ಕೆ.ಎಂ.ಶಿವಕುಮಾರ್, ಪಿ.ಎಸ್.ಮೂರ್ತಿ, ಪಿ.ಆರ್.ಶಿವಕುಮಾರ್, ಗಂಗಾಧರ್ ಇವರುಗಳು ವೇದಿಕೆಯಲ್ಲಿದ್ದರು. ವಿವಿಧ ಜಾನಪದ ಕಲಾತಂಡಗಳೊಂದಿಗೆ ಅಲಂಕೃತ ವಾಹನದಲ್ಲಿ ಬಸವಣ್ಣನವರ ಬೃಹತ್ ಭಾವಚಿತ್ರದ ಮೆರವಣಿಗೆ ನಡೆಯಿತು.

## ಸೇವಾ ಮನೋಭಾವ ಮೈಗೂಡಿಸಿಕೊಳ್ಳಲು ಎನ್‌ಎಸ್‌ಎಸ್ ಸಹಕಾರಿ: ಕಾಟವ್‌ಕರ್

» ಚಿತ್ರದುರ್ಗ




ಎನ್.ಎಸ್.ಎಸ್. ಶಿಬಿರದಲ್ಲಿ ಮಕ್ಕಳು ಪಾಲ್ಗೊಳ್ಳುವುದರಿಂದ ಶಿಸ್ತು, ಸಮಯ ಪ್ರಜ್ಞೆ ಸೇವಾ ಮನೋಭಾವ ಮೈಗೂಡಿಸಿಕೊಳ್ಳಲು ಸಹಕಾರಿಯಾಗಲಿದೆ ಎಂದು ನಿವೃತ್ತ ಪ್ರಾಚಾರ್ಯರು ಹಾಗೂ ರಾಷ್ಟ್ರೀಯ ಸೇವಾ ಯೋಜನೆ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಪರಶುರಾಮ್ ಕಾಟವ್‌ಕರ್ ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾನಿಲಯ, ಜಿಲ್ಲಾ ಮದಕರಿನಾಯಕ ವಿದ್ಯಾಸಂಸ್ಥೆ, ಮಹಾರಾಜ ಮದಕರಿನಾಯಕ ಕಲಾ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು, ಐ.ಕ್ಯು.ಎ.ಸಿ. ಸಹಯೋಗದೊಂದಿಗೆ ಸಿದ್ದಾಪುರದಲ್ಲಿರುವ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರದಿಂದ ಆರಂಭಗೊಂಡಿರುವ ಎನ್.ಎಸ್.ಎಸ್. ವಾರ್ಷಿಕ ವಿಶೇಷ ಶಿಬಿರ ಉದ್ಘಾಟಿಸಿ ಮಾತನಾಡಿದರು.ಹಳ್ಳಿಗಳ ಅಭಿವೃದ್ದಿಯಿಂದ ದೇಶ ಉದ್ದಾರ ಸಾಧ್ಯ ಎನ್ನುವುದು ಮಹಾತ್ಮಗಾಂಧಿರವರ ಪರಿಕಲ್ಪನೆ. ಹಾಗಾಗಿ ವಿದ್ಯಾರ್ಥಿಗಳು ಎನ್.ಎಸ್.ಎಸ್. ಶಿಬಿರಗಳಲ್ಲಿ ಭಾಗವಹಿಸುವ ಮೂಲಕ ಗ್ರಾಮೀಣರಲ್ಲಿ ಸ್ವಚ್ಚತೆ ಹಾಗೂ ಪರಿಸರ ಕಾಳಜಿಯನ್ನು ಮೂಡಿಸಬೇಕು. ಪ್ರತಿಯೊಬ್ಬರು ಆರೋಗ್ಯದಿಂದಿರಬೇಕಾದರೆ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಚವಾಗಿಟ್ಟುಕೊಳ್ಳಬೇಕೆಂದು ಹೇಳಿದರು.ಮಹಾರಾಜ ಕಾಲೇಜು ಸಹ ಪ್ರಾಧ್ಯಾಪಕರು ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕ-1 ರ ಶಿಬಿರಾಧಿಕಾರಿ ಪ್ರೊ. ಗಂಗಮ್ಮ ಎನ್.ಟಿ. ಮಾತನಾಡಿ ಐದು ದಿನಗಳ ಕಾಲ ನಡೆಯುವ ಎನ್.ಎಸ್.ಎಸ್.ಶಿಬಿರದಲ್ಲಿ ಮಹಿಳಾ ಸಬಲೀಕರಣ, ರಸ್ತೆ ಸುರಕ್ಷತಾ ಕಾನೂನು ಅರಿವು ಮೂಡಿಸಲಾಗುವುದು. ಸಕಲ ಜೀವ ರಾಶಿಗಳಿಗೂ ಶುದ್ದವಾದ ಗಾಳಿ ಸಿಗಬೇಕಾದರೆ ಪ್ರತಿಯೊಬ್ಬರು ಒಂದೊಂದು ಗಿಡ ನೆಟ್ಟು ದೊಡ್ಡ ಮರವನ್ನಾಗಿ ಬೆಳೆಸಿದಾಗ ಪರಿಸರಕ್ಕೆ ಹಚ್ಚ ಹಸಿರಿನ ಕೊಡುಗೆ ನೀಡಿದಂತಾಗುತ್ತದೆ. ಎನ್.ಎಸ್.ಎಸ್. ಅಂದರೆ ಸಮಾಜವನ್ನು ಸ್ವಚ್ಚವಾಗಿಡುವುದೆಂದರ್ಥ. ಪರಿಸ ಕಾಳಜಿ ವ್ಯಕ್ತಿತ್ವ ವಿಕಸನಕ್ಕೆ ಬುನಾದಿಯಿದ್ದಂತೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ರಾಷ್ಟ್ರೀಯ ಸೇವಾ ಯೋಜನೆ ಘಟಕ-2 ರ ಶಿಬಿರಾಧಿಕಾರಿ ಹಾಗೂ ಸಹಾಯಕ ಪ್ರಾಧ್ಯಾಪಕ ಪ್ರೊ.ಶ್ರೀನಿವಾಸ್ ಎನ್. ಗ್ರಾಮ ಪಂಚಾಯಿತಿ ಸದಸ್ಯರುಗಳಾದ ಪ್ರಸನ್ನಕುಮಾರ್, ವಿಷ್ಣುವರ್ಧನ್ ಇವರುಗಳು ವೇದಿಕೆಯಲ್ಲಿದ್ದರು.

## ಪ್ರಿಯಾಂಕ ಖರ್ಗೆ ವಿರುದ್ಧ ಧಿಕ್ಕಾರ ಕೂಗಿ ಕಾಂಗ್ರೆಸ್ ಕಚೇರಿಗೆ ನುಗ್ಗಲು ಯತ್ನಿಸಿದ ತಿಪ್ಪೇಸ್ವಾಮಿ ಬಂಧನ



» ಚಿತ್ರದುರ್ಗ

ಚಿತ್ತಾಪುರದಲ್ಲಿ ನಡೆದ ತಿರಂಗಾಯಾತ್ರೆ ಸಂದರ್ಭದಲ್ಲಿ ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿರವರ ಕಾರಿಗೆ ಮಸಿ ಬಳಿದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕಾ ಖರ್ಗೆ ವಿರುದ್ದ ಕಾಂಗ್ರೆಸ್ ಕಚೇರಿ ಎದುರು ಧಿಕ್ಕಾರಗಳನ್ನು ಕೂಗಿದ ಛಲವಾದಿ ಮುಖಂಡ ತಿಪ್ಪೇಸ್ವಾಮಿಯನ್ನು ಪೊಲೀಸರು ಶನಿವಾರ ಬಂಧಿಸಿ ಬಡಾವಣೆ ಠಾಣೆಗೆ ಕರೆದೊಯ್ದು ನಂತರ ಬಿಡುಗಡೆಗೊಳಿಸಿದರು.ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದ ಛಲವಾದಿ ನಾರಾಣಸ್ವಾಮಿ ಹಾಗೂ ಬೆಂಬಲಿಗರನ್ನು ಕೆಲವು ಕಾಲ ಐ.ಬಿ.ಯಲ್ಲಿ ಕೂಡಿ ಹಾಕಿ ಕಾಂಗ್ರೆಸ್ ಗೂಂಡಾಗಳು ಪ್ರಜಾಪ್ರಭುತ್ವವನ್ನು ಕಗ್ಗೊಲೆ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ದೌರ್ಜನ್ಯ, ದಬ್ಬಾಳಿಕೆ ಜಾಸ್ತಿಯಾಗುತ್ತಿದೆ. ಜವಾಬ್ದಾರಿ ಸ್ಥಾನದಲ್ಲಿರುವ ಛಲವಾದಿ ನಾರಾಯಣಸ್ವಾಮಿರವರನ್ನೆ ಈ ರೀತಿ ಕೇವಲವಾಗಿ ನಡೆಸಿಕೊಂಡರೆ ಇನ್ನು ಜನಸಾಮಾನ್ಯರ ಪಾಡೇನು? ಸಚಿವ ಪ್ರಿಯಾಂಕಾ ಖರ್ಗೆ ನೈತಿಕ ಹೊಣೆಹೊತ್ತು ರಾಜಿನಾಮೆ ನೀಡಬೇಕೆಂದು ಕಾಂಗ್ರೆಸ್ ಕಚೇರಿಗೆ ಒಂಟಿಯಾಗಿ ನುಗ್ಗಲೆತ್ನಿಸಿದ ತಿಪ್ಪೇಸ್ವಾಮಿ ಛಲವಾದಿಯನ್ನು ಹತ್ತಕ್ಕೂ ಹೆಚ್ಚು ಮಂದಿ ಪೊಲೀಸರು ಸುತ್ತುವರೆದು ಬಂಧಿಸಿದರು.

ಎಂ.ಕೆ.ನಟರಾಜ್, ಪ್ರದೀಪ್, ಆನಂದ್ ಪೈಲೆಟ್ ಇವರುಗಳು ಕಾಂಗ್ರೆಸ್ ಕಚೇರಿಗೆ ನುಗ್ಗಲೆತ್ನಿಸುತ್ತಿದ್ದುದನ್ನು ಮೊದಲೆ ಅರಿತ ಪೊಲೀಸರು ಕಾಂಗ್ರೆಸ್ ಕಚೇರಿ ಎದುರು ಬ್ಯಾರಿಕೇಡ್‌ಗಳನ್ನು ಅಡ್ಡ ಇಟ್ಟು ಕಾವಲು ಕಾಯುತ್ತಿದ್ದರು.

## ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ ದಾಖಲಾತಿ ಪ್ರಾರಂಭ

**ತುಮಕೂರು:** ಜಿಲ್ಲೆಯ ಶಿರಾ ತಾಲೂಕು ಚಿಕ್ಕನಹಳ್ಳಿಯಲ್ಲಿರುವ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ 2025-26ನೇ ಸಾಲಿನಲ್ಲಿ ಶಿಕ್ಷಕರ(ಡಿ.ಇಎಲ್.ಇಡಿ) ತರಬೇತಿ ನೀಡಲು ದಾಖಲಾತಿ ಪ್ರಾರಂಭವಾಗಿದ್ದು, ದ್ವಿತೀಯ ಪಿ.ಯು.ಸಿ ಉತ್ತೀರ್ಣ ಮತ್ತು ಪದವಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ.ಬೆಂಗಳೂರು ವಿಭಾಗದಲ್ಲಿ ಆಂಗ್ಲ ಮಾಧ್ಯಮದಲ್ಲಿ ನಡೆಯುವ ಸಂಸ್ಥೆ ಇದಾಗಿದ್ದು, ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಶೇ. 45 ಹಾಗೂ ಸಾಮಾನ್ಯ ವಿದ್ಯಾರ್ಥಿಗಳು ಶೇ.50ರಷ್ಟು ಅಂಕ ಗಳಿಸಿರಬೇಕು. ಶಿಕ್ಷಕರ ತರಬೇತಿಯಲ್ಲದೆ ಈ ಸಂಸ್ಥೆಯಲ್ಲಿ ಗಣಕಯಂತ್ರ ತರಬೇತಿ, ಸ್ಮಾರ್ಟ್ ಕ್ಲಾಸ್ ಬೋಧನೆ, ಶಿಕ್ಷಕರಾಗ ಬಯಸುವವರಿಗೆ ಟಿಇಟಿ ತರಬೇತಿ ನೀಡಲಾಗುವುದು. ನುರಿತ ಅನುಭವವುಳ್ಳ ಉಪನ್ಯಾಸಕರುಗಳಿಂದ ತರಬೇತಿ ಮತ್ತು ಬೋಧನೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂ. 9741069414, 9741507942, 9980870260, 7760783653, 9880331083, 9480250487ನ್ನು ಸಂಪರ್ಕಿಸಬಹುದು.

## ಪ್ರಮುಖ ಸುದ್ದಿ

### ಬನಶ್ರೀವೃದ್ದಾಶ್ರಮ ದಶಮಾನೋತ್ಸವ ಕಾರ್ಯಕ್ರಮ

# ವಯೋವೃದ್ದರಿಗೆ ಆಶ್ರಯ ನೀಡಿ ಅವರಿಗೆ ಉತ್ತಮ ಸೌಲಭ್ಯ ಕಲ್ಪಿಸುವ ಕಾರ್ಯ ಪ್ರಶಂಸನೀಯ: ಮಂಜುಳಾಪ್ರಸನ್ನಕುಮಾರ್

» ಚಳ್ಳಕೆರೆ



ಜೀವನದೂದ್ದಕ್ಕೂ ತನ್ನ ಸಮಾಜ, ಸಂಸಾರಕ್ಕಾಗಿ ಶ್ರಮಿಸುತ್ತಾ ಮುಪ್ಪಿನ ಕಾಲದಲ್ಲಿ ಆಶ್ರಯವಿಲ್ಲದೆ ಸಮಯದಲ್ಲಿ ಆಶ್ರಯ ನೀಡಿ ಲಾಲನೆ, ಪಾಲನೆ ಮಾಡುತ್ತಿರುವ, ನಿಸ್ವಾರ್ಥ ಸೇವಕಿ, ವೃದ್ದಾಶ್ರಮದ ಸಂಸ್ಥಾಪಕಿ ಎಸ್. ಮಂಜುಳಮ್ಮ ಅಭಿನಂದನಾರ್ಹರು ಎಂದು ನಗರಸಭೆ ಅಧ್ಯಕ್ಷೆ ಆರ್. ಮಂಜುಳಾಪ್ರಸನ್ನಕುಮಾರ್ ತಿಳಿಸಿದರು.

ಅವರು, ಬೆಂಗಳೂರು ರಸ್ತೆಯ ಬನಶ್ರೀ ವೃದ್ದಾಶ್ರಮದ ದಶಮಾನೋತ್ಸವ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕಳೆದ 10 ವರ್ಷಗಳಿಂದ ತಾಲ್ಲೂಕು ಸೇರಿದಂತೆ ರಾಜ್ಯದವಿವಿಧ ಭಾಗಗಳಿಂದ ಬಂಧ ವೃದ್ದರಿಗೆ ಆಶ್ರಮದಲ್ಲಿ ಎಲ್ಲಾ ಸೌಲಭ್ಯ ನೀಡುತ್ತಿದ್ಧಾರೆ. ಆಶ್ರಮವನ್ನು ಯಶಸ್ವಿಯಾಗಿ ನಡೆಸುವ ದೃಷ್ಠಿಯಿಂದ ಅನೇಕ ಆರ್ಥಿಕ ನೆರವು ನೀಡಿದ್ದಾರೆ. ಬನಶ್ರೀ ವೃದ್ದಾಶ್ರಮ ಇನ್ನೂ ಉತ್ತಮವಾಗಿ ಬೆಳೆದು ಆಶ್ರಯ ಬಯಸಿಬಂದವರಿಗೆ ಸೌಲಭ್ಯ ನೀಡಿ ನೆರವಾಗಲಿ ಎಂದು ಮನವಿ ಮಾಡಿದರು.

ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಟಿ.ತಿಪ್ಪೇಸ್ವಾಮಿ, ವಯೋವೃದ್ದರಿಗೆ ಈ ವೃದ್ದಾಶ್ರಮ ಉತ್ತಮ ನೆಲೆ ಕಲ್ಪಿಸಿದೆ. ಆಶ್ರಮ ಸಂಸ್ಥಾಪಕೆ ಮಂಜುಳಮ್ಮ ಬಹಳ ಶ್ರಮವಹಿಸಿ ಈ ಆಶ್ರಮ ನಡೆಸುತ್ತಾ ಬಂದಿದ್ದಾರೆ. ಅನೇಕ ದಾನಿಗಳು ನೆರವು ನೀಡಿರುವುದಾಗಿ ತಿಳಿದುಬಂತು. ಮುಂದಿನ ದಿನಗಳಲ್ಲಿ ಬನಶ್ರೀ ವೃದ್ದಾಶ್ರಮ ನಿರಾಶ್ರಿತರಿಗೆ ಆಶ್ರಯತಾಣವಾಗಲಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥಾಪಕಿ ಎಸ್.ಮಂಜುಳಮ್ಮ ಮಾತನಾಡಿ, ಪ್ರಾರಂಭದ ಹಂತದಲ್ಲಿ ವೃದ್ದಾಶ್ರಮ ಆರಂಭಿಸುವ ಬಗ್ಗೆ ಚರ್ಚೆ ನಡೆಸಿದಾಗ ಸೂಕ್ತ ಸ್ಪಂದನೆ ಸಿಗಲಿಲ್ಲ. ಆದರೂ ದೇವರನ್ನು ನಂಬಿ ನಾನುಈ ಕೆಲಸವನ್ನು ಪ್ರಾರಂಭಿಸಿದೆ. ಹಂತ, ಹಂತವಾಗಿ ಆಶ್ರಮಕ್ಕೆ ಅಗತ್ಯವಿರುವ ನೆರವು ಪಡೆಯಲು ಅನೇಕರನ್ನು ಸಂಪರ್ಕಿಸಿದೆ. ಎಲ್ಲರೂ ಸಹ ನಾವು ಮಾಡುವ ಉತ್ತಮ ಕಾರ್ಯವನ್ನು ಪ್ರೋತ್ಸಾಹಿಸಿ, ಪ್ರಶಂಸಿಸಿ ನೆರವು ನೀಡಿದ್ದಾರೆ. ವೃದ್ದಾಶ್ರಮ ಮುನ್ನಡೆಯಲು ಸಹಕರಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ನಗರಸಭಾ ಸದಸ್ಯ ಕೆ.ವೀರಭದ್ರಪ್ಪ, ಗ್ರಾಮಪಂಚಾಯಿತಿ ಸದಸ್ಯರಾದ ಎಂ.ಕುಮಾರಸ್ವಾಮಿ, ಎನ್.ಮಂಜುನಾಥ, ಕಾಂಗ್ರೆಸ್ ಮುಖಂಡರಾದ ಜಿ.ಟಿ.ಶಶಿಧರ, ಆರ್.ಪ್ರಸನ್ನಕುಮಾರ್, ಮಾಜಿಗ್ರಾಪಂ ಅಧ್ಯಕ್ಷೆ ಶೈಲಜಾಮಂಜುನಾಥ, ಡಿ.ಶ್ರೀನಿವಾಸ್, ಯತೀಶ್ ಮುಂತಾದವರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಆರ್ಯವೈಶ್ಯ ಸಮಾಜದ ಅಭಿವೃದ್ಧಿಗೆ ಅವೋಪಾ ಕಾರ್ಯಚಟುವಟಿಕೆ ಪ್ರೇರಕ: ಕೋರಾ



» **ಚಳ್ಳಕೆರೆ**

ಕರ್ನಾಟಕ ರಾಜ್ಯದ ಆರ್ಯವೈಶ್ಯ ಜನಾಂಗದ ಸರ್ವತೋಮುಖ ಅಭಿವೃದ್ಧಿಗಾಗಿ ಜನಾಂಗದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು, ವಿವಿಧ ವೃತ್ತಿಯಲ್ಲಿ ಪರಿಣಿತಿ ಹೊಂದಿದ ಹಿರಿಯರನ್ನು ಒಂದೆಡೆ ಸೇರಿಸಿ ಕರ್ನಾಟಕ ಅವೋಪಾ ಒಕ್ಕೂಟ ರಚಿಸಲಾಗಿದೆ. ಆರ್ಯವೈಶ್ಯ ಸಮಾಜದ ಸೇವೆಯನ್ನು ಎಲ್ಲಾ ವರ್ಗಗಳಿಗೂ ವಿಸ್ತರಿಸುವ ಚಿಂತನೆಯನ್ನು ಕರ್ನಾಟಕ ಅವೋಪಾ ಒಕ್ಕೂಟ (ಕರ್ನಾಟಕ ಆರ್ಯವೈಶ್ಯ ವೃತ್ತಿನಿರತ ಮತ್ತು ಅಧಿಕಾರಗಳ ಒಕ್ಕೂಟ) ಹೊಂದಿದೆ ಎಂದು ಒಕ್ಕೂಟದ ರಾಜ್ಯಾಧ್ಯಕ್ಷ ಎಸ್.ಎಲ್.ಕೋರಾ ತಿಳಿಸಿದರು. ಅವರು, ಭಾನುವಾರ ವಾಸವಿ ಮಹಲ್‌ನಲ್ಲಿ ರಾಜ್ಯಮಟ್ಟದ ಪ್ರಥಮ ಶಿಕ್ಷಕರ ಸಮಾವೇಶ, ಸಾಧಕ ಶಿಕ್ಷಕರಿಗೆ ಶ್ರೀವಾಸವಿ ಜ್ಞಾನಸಿರಿ ಪ್ರಶಸ್ತಿ ಹಾಗೂ ಕವನ ಸಿರಿ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ಅವೋಪಾಗಳ ಒಕ್ಕೂಟ 29 ವಿವಿಧ ಘಟಕಗಳನ್ನು ಹೊಂದಿದೆ. ಆದರೆ, ಆರ್ಯವೈಶ್ಯ ಸಮಾಜದ ಕ್ರಿಯಾಶೀಲ ಬೆಳವಣಿಗೆಗೆ ಕಾರ್ಯನಿರ್ವಹಿಸಿದ ಹಿರಿಯರನ್ನು ಆಯ್ಕೆಮಾಡಿ ಜವಾಬ್ದಾರಿ ನೀಡಲಾಗಿದೆ. ಬೆಂಗಳೂರು, ಬೆಳಗಾವಿ, ಗಲ್ಬುರ್ಗಿ ಮತ್ತು ಮೈಸೂರು ವಿಭಾಗಗಳಾಗಿ ಗುರುತಿಸಿ ರಾಜ್ಯದ 32 ಜಿಲ್ಲೆಗಳಲ್ಲಿ ಅವೋಪಾಗಳ ಒಕ್ಕೂಟದ ಸದಸ್ಯರು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದ್ದಾರೆಂದರು. ಇದೇ ಮೊಟ್ಟಮೊದಲ ಬಾರಿಗೆ ಸಮಾಜದ ಶಿಕ್ಷಕರನ್ನು ಗುರುತಿಸಿ ಪ್ರಶಸ್ತಿ ನೀಡುವ ಕಾರ್ಯಕ್ರಮ ನಡೆಯುತ್ತಿದೆ. ರಾಜ್ಯಮಟ್ಟದ ಪ್ರಥಮ ಶಿಕ್ಷಕರ ಸಮಾವೇಶ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯ ಸಮಾಜದಶಿಕ್ಷಕರುಆಗಮಿಸಿನಮ್ಮಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುತ್ತಿದ್ದಾರೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಲು ನಿರ್ಧರಿಸಿದೆ ಎಂದರು. ತುಮಕೂರು ವಿಶ್ವವಿದ್ಯಾಲಯ ಕುಲಪತಿ ಪ್ರೊ.ಎಂ.ವೆಂಕಟೇಶ್ವರಲು, ರಾಷ್ಟ್ರೀಯಾಧ್ಯಕ್ಷ ಬೆಳ್ಳಿಶ್ರೀಧರ್, ನಿರ್ದೇಶಕ ಬಿ.ಎಸ್.ರಘುವೀರ, ಕಾಲೇಜು ಅಭಿವೃದ್ಧಿಮಂಡಳಿ ನಿರ್ದೇಶಕ ಡಾ.ರಾಘವೇಂದ್ರಎಚ್.ಫತ್ತೆಪೂರ, ಆರ್ಯವೈಶ್ಯ ಸಂಘದ ತಾಲ್ಲೂಕು ಅಧ್ಯಕ್ಷ ಕೃಷ್ಣಮೂರ್ತಿ, ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಕೆ.ಪ್ರಸಾದ್, ಡಿ.ಗುರುರಾಜ್, ಹಿರಿಯ ಉಪಾಧ್ಯಕ್ಷ ಸಿ.ಈಶ್ವರಶೆಟ್ಟಿ, ಡಿ.ನಟರಾಜ್, ಡಾ.ಕೆ.ಪಿ.ನಾಗಭೂಷಣ್‌ಶೆಟ್ಟಿ, ರಾಜೇಶ್‌ಗುಪ್ತ, ಕುಮಾರ್, ಮಮತ, ರವಿಪ್ರಸಾದ್, ಎ.ಸಿ.ನಾಗೇಂದ್ರನ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮಕ್ಕೂ ಮುನ್ನ ನಗರದ ಎಪಿಎಂಸಿ ಮಾರುಕಟ್ಟೆಯ ಗಣೇಶನ ದೇವಸ್ಥಾನದಿಂದ ಆರ್ಯವೈಶ್ಯ ಸಮಾಜದ ಅಧಿದೇವತೆ ಶ್ರೀವಾಸಂವಾಭ ಭಾವಚಿತ್ರವುಳ್ಳ 103 ಮೀಟರ್ ಉದ್ದ ಬಾವುಟ ಮೆರವಣಿಗೆ ನಡೆಸಲಾಯಿತು.

## ಮೇ 27 ರಂದು ಉಚಿತ ಕಣ್ಣಿನ ತಪಾಸಣೆ ಶಿಬಿರ



» **ಚಿತ್ರದುರ್ಗ**

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಅಂಧತ್ವ ನಿವಾರಣಾ ವಿಭಾಗ, ನಗರ ಸಭೆ, ಶಿವಮೊಗ್ಗ ಶಂಕರ ಕಣ್ಣಿನ ಆಸ್ಪತ್ರೆ ಹಾಗೂ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರ ಸಹಯೋಗದಲ್ಲಿ ಚಿತ್ರದುರ್ಗ ನಗರದ ಗಾಯಿತ್ರಿ ಕಲ್ಯಾಣ ಮಂಟಪದಲ್ಲಿ ಮೇ 27 ರಂದು ಸಂಜೆ 4 ಗಂಟೆಗೆ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರ ಆಯೋಜಿಸಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಕಾರ್ಯಕ್ರಮ ಉದ್ಘಾಟಿಸುವರು. ಚಲನಚಿತ್ರ ಕಲಾವಿದ ದೊಡ್ಡಣ್ಣ ಘನ ಉಪಸ್ಥಿತರಿರುವರು. ನಗರಸಭೆ ಅಧ್ಯಕ್ಷೆ ಸುಮಿತಾ.ಬಿ.ಎನ್. ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿ.ಪಂ.ಸಿಇಓ ಸೋಮಶೇಖರ್.ಎಸ್.ಜೆ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ರೇಣುಪ್ರಸಾದ್.ಜಿ.ಪಿ, ಜಿಲ್ಲಾ ಶಸ್ತ್ರಚಿಕಿತ್ಸೆ ಡಾ.ರವೀಂದ್ರ, ಡಿಡಿಪಿಐ ಮಂಜುನಾಥ್, ಪೌರಾಯುಕ್ತೆ ರೇಣುಕಾ.ಎಂ, ನಗರ ಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ.ಜಿ.ಎಸ್, ಜಿಲ್ಲಾ ಅಂಧತ್ವ ನಿವಾರಣಾ ಕಾರ್ಯಕ್ರಮ ಅಧಿಕಾರಿ ಡಾ.ನಾಗರಾಜ್.ಜಿ.ಓ, ತಹಶೀಲ್ದಾರ್ ಗೋವಿಂದ್‌ರಾಜ್.ಬಿ.ಎಂ., ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಭಾಗವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿಯವರು ಕ್ಷೇತ್ರ 22 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಉಚಿತ ಕಣ್ಣಿನ ತಪಾಸಣೆ ಶಿಬಿರ ಆಯೋಜಿಸಿದ್ದಾರೆ.

# ಬೆಂಗಳೂರಲ್ಲಿಯೇ 2 ಲಕ್ಷ ಭಾವಸಾರ ಜನರಿದ್ದಾರೆ

» **ಚಿತ್ರದುರ್ಗ**

ಜಯಪ್ರಕಾಶ್‌ರವರ ಆಯೋಗ ಸರ್ಕಾರಕ್ಕೆ ನೀಡಿರುವ ವರದಿಯಲ್ಲಿ ಭಾವಸಾರ ಜನಾಂಗ ರಾಜ್ಯದಲ್ಲಿ ಕಡಿಮೆ ಸಂಖ್ಯೆಯಲ್ಲಿ ಇದೆ ಎಂದು ತಿಳಿಸಿದೆ ಇದು ತಪ್ಪು ರಾಜ್ಯದಲ್ಲಿ ನಮ್ಮ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಎಂಬುದನ್ನು ಆಯೋಗಕ್ಕೆ ತೋರಿಸಬೇಕಿದೆ. ಈ ಹಿನ್ನಲೆಯಲ್ಲಿ ಜಿಲ್ಲಾವಾರು ಪ್ರವಾಸ ಮಾಡುವುದರ ಮೂಲಕ ನಮ್ಮ ಸಮುದಾಯ ನಿಖರವಾದ ಸಂಖ್ಯೆಯನ್ನು ಪಡೆದು ಆಯೋಗದ ಮುಂದೆ ಇಡಲಾಗುವುದು ಇದಕ್ಕೆ ನಮ್ಮ ಸಮುದಾಯದವರು ಸಹಕಾರ ನೀಡುವಂತೆ ಅಖಿಲ ಭಾರತ ಭಾವಸಾರ ಕ್ಷತ್ರಿಯ ಸಮಾಜದ ರಾಜ್ಯ ಅಧ್ಯಕ್ಷರಾದ ಶ್ರೀನಿವಾಸ್ ಪಿಸ್ಸೆ ಕರೆ ನೀಡಿದರು.



ಚಿತ್ರದುರ್ಗ ನಗರದ ಭಾವಸಾರ ಕಲ್ಯಾಣ ಮಂಟಪದಲ್ಲಿ ಭಾನುವಾರ ಭಾವಸಾರ ಕ್ಷತ್ರಿಯ ಸಮಾಜದವತಿಯಿಂದ ಹಮ್ಮಿಕೊಂಡಿದ್ದ ಜಾತಿಗಣತಿ ಕುರಿತ ವಿಶೇಷ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಯಪ್ರಕಾಶ ಆಯೋಗ ನೀಡಿದ ವರದಿಯಲ್ಲಿ ರಾಜ್ಯದಲ್ಲಿ ನಮ್ಮ ಸಮುದಾಯ ಕೇವಲ 1,08,322 ಜನ ಸಂಖ್ಯೆ ಮಾತ್ರ ಇದೆ ಎಂದು ತಿಳಿಸಲಾಗಿದೆ ಆದರೆ ಇದು ತಪ್ಪು ಬರೀ ಬೆಂಗಳೂರು ಒಂದರಲ್ಲಿಯೇ 2 ಲಕ್ಷ ನಮ್ಮ ಸಮುದಾಯವರಿದ್ದಾರೆ ಇವರು ಜನಗಣತಿ ಮಾಡುವಾಗ ಸರಿಯಾಗಿ ಮಾಡಿಲ್ಲ ಒಂದಾದರೆ ಮತ್ತೊಂದು ಮಾತೃ ಭಾಷೆಯಲ್ಲಿ ನಾವುಗಳು ಮರಾಠಿ ಎಂದು ನಮೂದಿಸಲಾಗಿದೆ ಇದರಿಂದ ನಮ್ಮೆಲ್ಲರನ್ನು ಮರಾಠಿ ಗುಂಪಿಗೆ ಸೇರಿಸಲಾಗಿದೆ ಇಂದರಿಂದ ನಮ್ಮ ಸಮುದಾಯವರ ಸಂಖ್ಯೆ ಕ್ಷೀಣವಾಗಿದೆ ಎಂದರು.

ಈ ಸತ್ಯವನ್ನು ಅರಿತ ಅಖಿಲ ಭಾರತ ಭಾವಸಾರ ಕ್ಷತ್ರಿಯ ಸಮಾಜ ರಾಜ್ಯದಲ್ಲಿ ನಮ್ಮ ಸಮುದಾಯವರ ಎಷ್ಟು ಇದ್ದಾರೆ ಎಂಬುದನ್ನು ಪತ್ತೆ ಮಾಡುವ ಕಾರ್ಯಕ್ಕೆ ಮುಂದಾಗಿ ಜಿಲ್ಲಾವಾರು ಪ್ರವಾಸವನ್ನು ಕೈಗ್ಗೊಂಡು ನಮ್ಮ ಸಮುದಾಯದವರು ಎಷ್ಟು ಇದ್ದಾರೆ ಎಂಬ ನಿಖರವಾದ ಮಾಹಿತಿಯನ್ನು ಜಿಲ್ಲಾ ಸಂಘದಿಂದ ಸಂಗ್ರಹ ಮಾಡಲಾಗುತ್ತಿದೆ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಮಾಹಿತಿ ಸಂಗ್ರಹವಾದ ಮೇಲೆ ಅದನ್ನು ಆಯೋಗಕ್ಕೆ ನೀಡುವುದರ ಮೂಲಕ ರಾಜ್ಯದಲ್ಲಿ ನಮ್ಮ ಜನ ಸಂಖ್ಯೆ ಇಷ್ಟಿದೆ ಎಂದು ತಿಳಿಸಲಾಗುವುದು ಅವರು ಒಪ್ಪಿದರೆ ಸರಿ ಇಲ್ಲವಾದರೆ ನ್ಯಾಯಾಲಯದ ಮೊರೆ ಹೋಗಲಾಗುವುದು ಎಂದ ಅವರು ಈಗ ನಮ್ಮ ಸಮುದಾಯ ಜನ ಸಂಖ್ಯೆ ತಪ್ಪಾಗಿದೆ ಅದನ್ನು ಈಗಲೇ ಸರಿಪಡಿಸಬೇಕಿದೆ ಇಲ್ಲವಾದಲ್ಲಿ ಮುಂದೆ ಸರ್ಕಾರದಿಂಧ ನಮಗೆ ಸಿಗುವಂತೆ ವಿವಿಧ ರೀತಿಯ ಸೌಲಭ್ಯಗಳು ಸಿಗದಂತೆ ಆಗಬಹುದಾಗಿದೆ ಈ ಹಿನ್ನಲೆಯಲ್ಲಿ ನಮ್ಮ ಸಮುದಾಯದ ನಿಖರವಾದ ಸಂಖ್ಯೆಯನ್ನು ಪಡೆಯಲು ಮುಂದಾಗಿದ್ದೇವೆ ಎಂದರು.

ಜಾತಿ ಜನಗಣತಿಯಲ್ಲಿ ಸರ್ಕಾರ ದರ್ಜಿ, ಬಾವಸಾರ, ಸೇರಿದಂತೆ ಇತರೆಗಳನ್ನು ನಮೂದಿಸಿದೆ ಆದರೆ ಇಲ್ಲಿ ದರ್ಜಿ ಎನ್ನುವುದು ನಾವು ಮಾಡುವ ಕುಲ ಕಸುಬಾಗಿದೆ ಆದು ಜಾತಿ ಅಲ್ಲ ನಮ್ಮ ಜಾತಿ ಭಾವಸಾರ ಇದು ತಿದ್ದುಪಡಿಯಾಗಬೇಕಿದೆ. ಇದಾಗದಿದ್ದರೆ ನಮಗೆ ಏನು ಆಗುವುದಿಲ್ಲ ಆದರೆ ನಮ್ಮ ಮುಂದಿನ ಪೀಳಿಗೆ ಅನ್ಯಾಯವಾಗಲಿದೆ ಇದನ್ನು ಈಗಲೇ ಸರಿಪಡಿಸಬೇಕಿದೆ ಎಂದು ಶ್ರೀನಿವಾಸ್ ಪಿಸ್ಸೆ ತಿಳಿಸಿದರು.

ಅಖಿಲ ಭಾರತ ಭಾವಸಾರ ಕ್ಷತ್ರಿಯ ಸಮಾಜದ ಪ್ರಧಾನ ಕಾರ್ಯದರ್ಶಿ ಸುದರ್ಶನ್ ಸುಲಾಖೆ ಮಾತನಾಡಿ, ಜಾತಿ ಜನಗಣತಿ ಬಹು ಹಿಂದಿನ ವರ್ಷಗಳಲ್ಲಿ ಆಗಿದೆ, ನಮಗೆ ಮೀಸಲಾತಿ ಅನಿವಾರ್ಯವಾಗಿದೆ ಉದ್ಯೋಗ ಮತ್ತು ಶಿಕ್ಷಣಕ್ಕೆ ಅನಿವಾರ್ಯವಾಗಿದೆ, ಇದರಿಂದ ನಮ್ಮ ಸಮುದಾಯದ ಜನ ಸಂಖ್ಯೆಯನ್ನು ಸರಿಯಾದ ರೀತಿಯಲ್ಲಿ ನಮೂದಿಸಬೇಕಿದೆ, ಅಯೋಗದವರುಇ ನಮ್ಮ ಸಮುದಾಯವನ್ನು ಕಡಿಮೆ ತೋರಿಸಿದ್ದಾರೆ. ರಾಜ್ಯದಲ್ಲಿ ನಮ್ಮ ಸಮುದಾಯ ಸುಮಾರು 5 ಲಕ್ಷಕ್ಕೂ ಹೆಚ್ಚಿದೆ. ನಮಗೆ ಆಯೋಗದಿಂದ ಸರಿಯಾದ ರೀತಿಯಲಿ ನ್ಯಾಯ ಸಿಗದಿದ್ದರೆ ನಾವುಗಳು ನ್ಯಾಯಾಯದ ಮೆಟ್ಟಿಲನ್ನು ಏರುವ ಅನಿವಾರ್ಯತೆ ಇದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಮಾಜದ ಮುಖಂಡರಾದ ಶ್ಯಾಮ್ ಮುಸುಳೆ ವಹಿಸಿದ್ದರು. ಸಮಾಜದ ಮುಖಂಡರಾದ ಸತ್ಯನಾರಾಯಣ ಅಟ್ಟಕ್ಕರ್, ಸೀತಾರಾಮ್ ರಂಗದೊಳ್, ಸತ್ಯನಾರಾಯಣ, ಅಶೋಕ್, ಕಿರಣ್, ಆನಂದಕುಮಾರ್, ಚಿತ್ರದುರ್ಗದ ಸಮಾಜದ ಮುಖಂಡರಾದ ನಾಗರಾಜ್ ಬೇದ್ರೇ,ಶ್ರೀನಾಥ್ ಬೇದ್ರೇ,ಶ್ರೀಧರ್ ಗುಜ್ಜರ್, ರಾಜೇಶ್ ಬೇದ್ರೇ, ಬಾಲಕೃಷ್ಣ ಗುಜ್ಜರ್, ನಟರಾಜ್‌ಕುಂಟೆ,ಸೇರಿದಂತೆಬೆಂಗಳೂರು, ತುಮಕೂರು, ಶಿರಾ, ಚಿತ್ರದುರ್ಗ, ಪಾವಗಡ, ಹೊಸದುರ್ಗಗಳಿಂದ ಸಮಾಜದ ಭಾಂದವರು ಸಭೆಯಲ್ಲಿ ಭಾಗವಹಿಸಿದ್ದರು.

# ಸರ್ಕಾರಿ ಶಾಲೆಗಳ ದಾಖಲಾತಿಗಳನ್ನು ಹೆಚ್ಚಿಸಲು ಶಿಕ್ಷಕರು ಪರಿಶ್ರಮ ವಹಿಸಿ : ಕೆ.ಎಸ್.ಸುರೇಶ್

» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ಸರ್ಕಾರಿ ಶಾಲೆಗಳು ಈ ತಿಂಗಳ 30ರಿಂದ ಪುನರಾಂಭವಾಗಲಿದ್ದು, ಶೈಕ್ಷಣಿಕ ವರ್ಷ ಆರಂಭದ ಹಿನ್ನೆಲೆಯಲ್ಲಿ ಎಲ್ಲಾ ಶಾಲೆಯ ಮುಖ್ಯ ಶಿಕ್ಷಕರು, ಶಿಕ್ಷಕರು ಶೈಕ್ಷಣಿಕ ಅಭಿವೃದ್ಧಿಗೆ ತಮ್ಮದೇಯಾದ ಕೊಡುಗೆ ನೀಡಬೇಕಿದೆ. ಶಿಕ್ಷಣ ಇಲಾಖೆ ಸೂಚಿಸಿದ ಎಲ್ಲಾ ಸೂಚನೆ ಪಾಲಿಸಬೇಕು, ವಿಶೇಷವಾಗಿ ಶಾಲೆಗಳ ದಾಖಲಾತಿ ಹೆಚ್ಚಿಸುವಲ್ಲಿ ಶಿಕ್ಷಕರು ಮನೆ, ಮನೆ ಭೇಟಿ ನಡೆಸಿ ಮಕ್ಕಳು ಶಾಲೆಗೆ ಸೇರ್ಪಡೆಯಾಗುವಂತೆ ಪೋಷಕರನ್ನು ಪ್ರೇರೇಪಿಸಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.



ಅವರು, ಶನಿವಾರ ನಗರದ ರೋಟರಿ ಬಾಲಭವನದಲ್ಲಿ ತಳಕು ಹೋಬಳಿ ಕ್ಲಸ್ಟರ್ ವಿಭಾಗದ ಶಾಲೆಗಳ ಪುನರಾಂಭ ಕುರಿತಂತೆ ಕೈಗೊಳ್ಳಬೇಕಾದ ಯೋಜನೆ, ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳು ಹಾಗೂ ಗುಣಮಟ್ಟದ ಶಿಕ್ಷಣ ನೀಡುವ ಬಗ್ಗೆ ಶಿಕ್ಷಕರಿಗೆ ಮಾರ್ಗದರ್ಶನ ಮಾಡಿದರು. ಶಾಲೆಗಳ ಆರಂಭಕ್ಕೂ ಮುನ್ನ ಸಂಬಂಧಿಸಿದ ಎಲ್ಲಾ ಶಿಕ್ಷಕರು ಶಾಲೆಗೆ ಭೇಟಿ ನೀಡಿ ಅಗತ್ಯ ಸೌಲಭ್ಯಗಳ ಬಗ್ಗೆ ಗಮಹರಿಸಿ ಅವುಗಳ ಪರಿಹಾರಕ್ಕೂ ಯತ್ನಿಸಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿಕ್ಷಣ ಸಂಯೋಜಕ ಪಿ.ಮಾರುತಿಭಂಡಾರಿ, ಇತ್ತೀಚಿನ ದಿನಗಳಲ್ಲಿ ಶಿಕ್ಷಣ ಇಲಾಖೆ ಶೈಕ್ಷಣಿಕ ಅಭಿವೃದ್ಧಿ ದಾಖಲಿಸುವ ಹಿನ್ನೆಲೆಯಲ್ಲಿ ಹಲವಾರು ಮಹತ್ತರ ಯೋಜನೆಗಳನ್ನು ರೂಪಿಸಿದೆ. ಈಗಾಗಲೇ ತಾಲ್ಲೂಕು ಮಟ್ಟದ ಎಲ್ಲಾ ಸಿಆರ್‌ಪಿ ಮತ್ತು ಶಿಕ್ಷಣ ಸಂಯೋಜಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಮಾರ್ಗದರ್ಶನ ನೀಡಿದ್ದಾರೆ. ಶಿಕ್ಷಣದ ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರವನ್ನು ಶಿಕ್ಷಣ ಇಲಾಖೆ ಬಯಸುತ್ತದೆ ಎಂದರು.

ಸಭೆಯಲ್ಲಿ ಅಕ್ಷರ ದಾಸೋಹ ಅಧಿಕಾರಿ ಜಿ.ಟಿ.ಮಂಜುನಾಥಸ್ವಾಮಿ, ಕ್ಷೇತ್ರ ಸಮನ್ವಯಾಧಿಕಾರಿ ಬಿ.ತಿಪ್ಪೇಸ್ವಾಮಿ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷೆ ಸಣ್ಣಸೂರಮ್ಮ, ಜಗನ್ನಾಥ, ಮೃತ್ಯುಂಜಯ, ವೆಂಕಟಸ್ವಾಮಿ, ಮಂಜುನಾಥ, ಪುಷ್ಪ, ಗೌರಮ್ಮ, ಕೇಶವಮೂರ್ತಿ, ರಾಜು, ಸೋಮಶೇಖರ್, ಕೆ.ಎಸ್.ಶ್ರೀಕಾಂತ್, ಸುರೇಶ್, ತಿಪ್ಪೇಸ್ವಾಮಿ, ಎನ್.ಮಾರಣ್ಣ ಮುಂತಾದವರು ಉಪಸ್ಥಿತರಿದ್ದರು.



ಸಿರಿಗೆರೆ ಹೋಬಳಿ ಮದಕರಿಪುರ ಗ್ರಾಮದಲ್ಲಿ ಆಸ್ಪತ್ರೆ, ಶಾಲೆ ಹಾಗೂ ನೂತನ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ಡಾ.ಎಂ.ಚಂದ್ರಪ್ಪನವರಿಂದ ಭೂಮಿ ಪೂಜೆ.

## ಸಂಖ್ಯಾಜ್ಞಾನಕ್ಕೆ ಕಲಿಕಾ ಪರ್ವ ಕೈಗನ್ನಡಿ: ಬಿಇಒ ನಾಗಭೂಷಣ್



» **ಚಿತ್ರದುರ್ಗ**

ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಶಿಕ್ಷಕರ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾ ಜ್ಞಾನವನ್ನು ಹೆಚ್ಚಿಸಲು ತಾಲ್ಲೂಕಿನಾದ್ಯಂತ ಏಕರೂಪವಾದ ಚಟುವಟಿಕೆಗಳನ್ನು ನಿರ್ವಹಿಸಲು ಕಲಿಕಾ ಪರ್ವ ಎಂಬ ಚಟುವಟಿಕೆಗಳ ಕೈಪಿಡಿ ಸಿದ್ಧಪಡಿಸಿದ್ದು, ಎಲ್ಲಾ ಮುಖ್ಯ ಶಿಕ್ಷಕರು ತಮ್ಮ ಶಾಲೆಯ ಶಿಕ್ಷಕರಿಗೆ ಮಾಹಿತಿ ನೀಡಿ ಪರಿಣಾಮಕಾರಿಯಾಗಿ ಅನುಷ್ಠನಗೊಳಿಸಬೇಕು ಎಂದು ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಹೇಳಿದರು. ನಗರದ ಹಳೇ ಮಾಧ್ಯಮಿಕ ಶಾಲೆಯ ಬಿಆರ್‌ಸಿ ಕೇಂದ್ರದ ಆವರಣದಲ್ಲಿ ಈಚೆಗೆ ನಡೆದ 2025–26ನೇ ಸಾಲಿನ ಶಾಲಾ ಪ್ರಾರಂಭೋತ್ಸವದ ಕುರಿತಾಗಿ ಚಿತ್ರದುರ್ಗ ತಾಲ್ಲೂಕಿನ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಸರ್ಕಾರಿ, ಅನುದಾನಿತ ಪ್ರಾಥಮಿಕ ಶಾಲೆಗಳ ಮುಖ್ಯ ಶಿಕ್ಷಕರ ಸಭೆಯಲ್ಲಿ ಅವರು ಮಾತನಾಡಿದರು. ಎಸ್.ಎಸ್.ಎಲ್.ಸಿ ಫಲಿತಾಂಶವು ಸಹ ಪ್ರಾಥಮಿಕ ಶಿಕ್ಷಣವನ್ನು ಅವಲಂಭಿಸಿದ್ದು, ಪ್ರಾಥಮಿಕ ಶಾಲಾ ಶಿಕ್ಷಕರ ಜವಾಬ್ದಾರಿಯನ್ನು ತಿಳಿಸಿದರು. ಕ್ಷೇತ್ರ ಸಮನ್ವಯಾಧಿಕಾರಿ ಈ.ಸಂಪತ್ ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿಆರ್‌ಪಿ ಕೆ.ಖಲಂದರ್ ಕ್ರಿಯಾಯೋಜನೆಯಲ್ಲಿನ ಅಂಶಗಳನ್ನು ವಿವರಿಸಿದರು. ಬಿಆರ್‌ಪಿ ವಿದ್ಯಾ ಸ್ವಾಗತಿಸಿದರು. ಬಿಆರ್‌ಪಿ ಷಾಹಿನ ಖಾನಂ ಕಾರ್ಯಕ್ರಮ ನಿರ್ವಹಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ಹನುಮಂತಪ್ಪ, ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳಾದ ಬಿ.ವಿಮಲಾಕ್ಷಿ, ಉಮೇಶಯ್ಯ, ವಾಸಂತಿ ಮತ್ತು ಎಲ್ಲಾ ಸಿಆರ್‌ಪಿಗಳು ಹಾಜರಿದ್ದರು.

## ಸಹಾಯ ಧನಕ್ಕೆ ಅರ್ಜಿ

**ಚಿತ್ರದುರ್ಗ:** ನಗರ ಸಭೆಯ ಶೇ.5 ಹಾಗೂ ಶೇ.7.25 ರ ಅನುದಾನದಡಿ 2025–26ನೇ ಸಾಲಿಗೆ ದಿವ್ಯಾಂಗ ಅನಿಲ ರಹಿತ ಕುಟುಂಬಗಳಿಗೆ ಅನಿಲ ಸಂಪರ್ಕ ಪಡೆಯಲು ಸಹಾಯ ಧನ ಒದಗಿಸಲು ಹಿರಿಯೂರು ನಗರಸಭೆಯಿಂದ ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ 1 ಸಿಲಿಂಡರ್ ಹಾಗೂ 1 ಸ್ಟೌವ್‌ನ್ನು ಮಾರ್ಗಸೂಚಿಗಳ ಅನುಸಾರ ನೀಡಲಾಗುವುದು. ಶೇ.5 ಹಾಗೂ ಶೇ.7.25 ರ ಅನುದಾನದಡಿ ಬಡ ವಿದ್ಯಾರ್ಥಿಗಳಿಗೆ ವಿಶೇಷ ನೆರವು ಸಹ ನೀಡಲಾಗುತ್ತದೆ. ನಗರ ಸಭೆ ವ್ಯಾಪ್ತಿಯ ದಿವ್ಯಾಂಗ ಹಾಗೂ ಬಡ ವಿದ್ಯಾರ್ಥಿಗಳು ಜೂನ್ 10 ರ ಒಳಗೆ ಅರ್ಜಿ ಸಲ್ಲಿಸಿ ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಪೌರಾಯುಕ್ತ ಎ.ವಾಸೀಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಡಿಎಪಿ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರ ಬಳಸಿ

» **ಚಿತ್ರದುರ್ಗ**

ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರ ಬಳಸುವಂತೆ ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ರೈತರಿಗೆ ಸಲಹೆ ನೀಡಿದ್ದಾರೆ.

ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ 17 ಪೋಷಕಾಂಶಗಳ ಅಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತವೆ. ಉಳಿದ 14 ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೊಟ್ಯಾಷ್ ಹೆಚ್ಚಿನ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು, ಕ್ಯಾಲ್ಸಿಯಂ, ಮೆಗ್ನೇಷಿಯಂ, ಗಂಧಕ, ಕಬ್ಬಿಣ, ಜಿಂಕ್, ಬೋರಾನ್, ತಾಮ್ರ, ಮ್ಯಾಂಗನೀಸ್, ಮಾಲಬಿಡಿನಂ, ಕ್ಲೋರಿನ್ ಮತ್ತು ನಿಕಲ್ ಕಡಿಮೆ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಲಘು ಪೋಷಕಾಂಶಗಳೆಂದು ವಿಂಗಡಿಸಲಾಗಿದೆ. ಇವುಗಳಲ್ಲಿ ಯಾವುದೇಒಂದು ಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತುಅಭಿವೃದ್ಧಿಯ ಮೇಲೆ ಪರಿಣಾಮ ಬೀರಿ ಇಳುವರಿ ಕುಂಠಿತವಾಗುತ್ತದೆ.

ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯಆಧಾರ, ಮಣ್ಣಿನಿಂದಲೇ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ. ಬೆಳೆಗಳಿಗೆ ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ (ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಇತ್ಯಾದಿ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿದ್ದು, ರಸಗೊಬ್ಬರಗಳಲ್ಲಿ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ಮತ್ತು ನೇರವಾಗಿ ದೊರೆಯುವ ರೂಪದಲ್ಲಿದ್ದು ಅವುಗಳ ಬಳಕೆ ಅತ್ಯಗತ್ಯವಾಗಿರುತ್ತದೆ.

ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ.ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ




ಮತ್ತುರಂಜಕದ ಅಂಶ ಮಾತ್ರವಿರುತ್ತದೆ. ಆದರೆ ಬೆಳೆಗಳಿಗೆ ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್‌ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದಾಗಿದೆ.

ಶಿಫಾರಸ್ಸಿನಂತೆ ಬೆಳೆಗಳಿಗೆ ಸಾರಜನಕ, ರಂಜಕ, ಪೊಟ್ಯಾಷ್ ರಸಗೊಬ್ಬರಳನ್ನು 4:2:1 ಅನುಪಾತದಲ್ಲಿ ಬಳಸಬೇಕಾಗಿರುತ್ತದೆ. ಆದರೆ ಪ್ರಸ್ತುತ ರೈತರು ಯಥೇಚ್ಚವಾಗಿ ಬಳಸುತ್ತಿರುವ ಸದರಿ ರಸಗೊಬ್ಬರಗಳ ಅನುಪಾತವು 6.0:3.9:1.0 ಆಗಿರುತ್ತದೆ. ಇದನ್ನು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆಯನ್ನು ಉತ್ತೇಜಿಸಿ, ಸಂಯುಕ್ತ ರಸಗೊಬ್ಬರಗಳನ್ನು ಬಳಸುವುದರಿಂದ ಸರಿದೂಗಿಸಬಹುದಾಗಿರುತ್ತದೆ.

ಅಲ್ಲದೇ ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೇ ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13, 16:200:13 ಹಾಗೂ ಇವತೆ ಸಂಯುಕ್ತ ರಸಗೊಬ್ಬರಗಳಾದ 15:15:15, 10:26:26, 12:32:16, 22:22:11, 14:35:15, 17:17:17, 14:28:14, 19:19:19, 20:10:10, 15:15:15, 15:15:15 ಇತ್ಯಾದಿ ಹಾಗೂ ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ರಂಜಕ್ ಪೋಷಕಾಂಶ ನೀಡುವ ಪ್ರಾಮಂ, ಸಿಂಗಲ್ ಸೂಫರ್ ಪಾಸ್ಫೇಟ್ ಮತ್ತು ಟ್ರಿಪಲ್ ಸೂಫರ್ ಪಾಸ್ಫೇಟ್ ಹಾಗೂ ನ್ಯಾನೋ ಡಿ.ಎ.ಪಿ ರಸಗೊಬ್ಬರಗಳನ್ನು ಸಹ ಬಳಸಬಹುದಾಗಿದೆ. ರೈತರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ.

ಪ್ರಸ್ತುತ ಮಾರುಕಟ್ಟೆಯಲ್ಲಿ ಕಪ್ಪು ಮತ್ತು ಬಿಳಿ ಬಣ್ಣದ ಅರಳು ರೂಪದ ಡಿ.ಎ.ಪಿ ರಸಗೊಬ್ಬರ ಲಭ್ಯವಿದ್ದು, ಇವುಗಳ ಗುಣಮಟ್ಟದಲ್ಲಿ ಮತ್ತು ಶೇಕಡ ಪೋಷಕಾಂಶಗಳಲ್ಲಿ ಯಾವುದೇ ವ್ಯಾತ್ಯಾಸವಿರುವುದಿಲ್ಲ. ಅದುದರಿಂದ ರೈತರು ಯಾವುದೇ ಗೊಂದಲವಿಲ್ಲದೆ ಮಾರುಕಟ್ಟೆಯಲ್ಲಿ ಲಭ್ಯವಿರುವ ಕಪ್ಪು ಅಥವಾ ಬಿಳಿ ಬಣ್ಣದ ಅರಳು ರೂಪದ ಡಿ.ಎ.ಪಿ ರಸಗೊಬ್ಬರ ಬಳಸಬಹುದಾಗಿದೆ ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ರಾಣೇಬೆನ್ನೂರು ಎಐಟಿಯುಸಿ ಚುನಾವಣೆ, ಆಯ್ಕೆ



» ದಾವಣಗೆರೆ

ಹಾವೇರಿ ಜಿಲ್ಲೆಯ ರಾಣೇಬೆನ್ನೂರು ತಾಲೂಕಿನ ಕರೂರು ರಾಮಕೋ ಸಿಮೆಂಟ್ ಶೀಟ್ ಇಂಡಸ್ಟ್ರೀಸ್‌ನಲ್ಲಿ ಶನಿವಾರ ನಡೆದ ಚುನಾವಣೆಯಲ್ಲಿ ರಾಣೇಬೆನ್ನೂರು ತಾಲುಕು ಘಟಕಕ್ಕೆ ಎಐಟಿಯುಸಿ ನೇತೃತದ ತಂಡವಾದ ದಾವಣಗೆರೆಯ ಆವರಗೆರೆ ಹೆಚ್.ಜಿ.ಉಮೇಶ್ ಅಧ್ಯಕ್ಷರಾಗಿ ಆಯ್ಕೆ ಆಗಿದ್ದಾರೆ. ಪ್ರಧಾನ ಕಾರ್ಯದರ್ಶಿಯಾಗಿ ಹೆಚ್.ವೈ.ನಿಂಗಪ್ಪ, ಸಹ ಕಾರ್ಯದರ್ಶಿಯಾಗಿ ವಿಜಯ್‌ಕುಮಾರ್, ಉಪಾಧ್ಯಕ್ಷರಾಗಿ ಸೋಮಲಿಂಗಪ್ಪ ಹುಣಸಿಕಟ್ಟಿ, ಕಾರ್ಯಕಾರಿ ಸಮಿತಿ ಸದಸ್ಯರಾಗಿ ಸಿದ್ದಪ್ಪ ಅಂಗಡಿ, ಕುಮಾರ್ ಹಿರೇಬಿದರಿ, ಸೈಯದ್ ಸೈಫುಲ್ಲಾ, ಅಂಗಡಿ ಶಿವಮೂರ್ತಪ್ಪ, ಸಿಐಟಿಯು ಪ್ರಥಮ ಅಧ್ಯಕ್ಷರಾಗಿ ಹೊನ್ನಪ್ಪ ಒಡೆಯರ್, ಖಜಾಂಚಿಯಾಗಿ ಪ್ರತಾಪ್ ಬಕ್ಕೋಜಿ, ಕಾರ್ಯಕಾರಿ ಸಮಿತಿ ಸದಸ್ಯರಾಗಿ ರಮೇಶ್ ಕರಡಿ, ಮಂಜುನಾಥ್ ಅಗಸಿ, ಶಿವನಗೌಡ ರಾಮೇಗೌಡ, ತಿಪ್ಪಣ್ಣ ಪರಿಕವರು ಆಯ್ಕೆ ಆಗಿದ್ಧಾರೆ.

### ರಕ್ತದಾನಿಗಳಿಗೆ ಪುರಸ್ಕಾರ

» ಚಿತ್ರದುರ್ಗ

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ರಾಜ್ಯ ಶಾಖೆ ವತಿಯಿಂದ ಜೂನ್ 14ರಂದು ನಡೆಯುವ ವಿಶ್ವ ರಕ್ತದಾನಿಗಳ ದಿನಾಚರಣೆ ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ಕನಿಷ್ಟ 25ಕ್ಕೂ ಹೆಚ್ಚು ಬಾರಿ ರಕ್ತದಾನ ಮಾಡಿರುವ ದಾನಿಗಳಿಗೆ ಪುರಸ್ಕಾರ ನೀಡಿ ಗೌರವಿಸಲಾಗುವುದು. ಯಾವುದೇ ಪ್ರತಿಫಲವನ್ನು ಅಪೇಕ್ಷಿಸದೇ, ಇನ್ನೊಬ್ಬರ ಅಮೂಲ್ಯವಾದ ಜೀವ ಉಳಿಸಬೇಕೆಂಬ ಧ್ಯೆಯ ಇಟ್ಟುಕೊಂಡು, ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ರಕ್ತದಾನಿಗಳಿಗೆ ಗೌರವ ಮತ್ತು ಹೃತ್ಪೂರ್ವಕ ವಂದನೆ ಸಲ್ಲಿಸುವ ಮುಖ್ಯ ಉದ್ದೇಶದಿಂದ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ರಾಜ್ಯ ಶಾಖೆ ಬೆಂಗಳೂರು ಅವರು ಜೂನ್ 14ರಂದು ವಿಶ್ವ ರಕ್ತದಾನಿಗಳ ದಿನಾಚರಣೆ ದಿನದಂದು ರಕ್ತದಾನಿಗಳನ್ನು ಗೌರವಿಸುವ ಸಲುವಾಗಿ ಎಲ್ಲಾ ಜಿಲ್ಲೆಗಳಿಂದ ಒಬ್ಬ ರಕ್ತದಾನಿಯನ್ನು ಗೌರವಿಸಲಾಗುತ್ತದೆ. ಪ್ರಯುಕ್ತ ಚಿತ್ರದುರ್ಗ ಜಿಲ್ಲೆಯಿಂದ ಕನಿಷ್ಠ 25 ಬಾರಿ ಮೇಲ್ಪಟ್ಟು ರಕ್ತದಾನ ಮಾಡಿರುವ ಒಬ್ಬ ರಕ್ತದಾನಿಯನ್ನು ನಾವುಗಳು ರೆಡ್ ಕ್ರಾಸ್ ರಾಜ್ಯ ಶಾಖೆಗೆ ಕಳುಹಿಸ ಬೇಕಾಗಿರುತ್ತದೆ. ರಕ್ತದಾನಿ ಅಥವಾ ಅವರಿಗೆ ಸಂಬಂಧಿಸಿದವರು ರಕ್ತದಾನಕ್ಕೆ ಸಂಬಂಧಿಸಿದ ಪ್ರಮಾಣ ಪತ್ರಗಳ ದಾಖಲೆಯ ಪ್ರತಿಯೊಂದಿಗೆ ರಕ್ತದಾನಿಯ ವಿಳಾಸ ಹಾಗೂ ಮೊಬೈಲ್ ಸಂಖ್ಯೆಯ ವಿವರವನ್ನು ಇದೇ ಮೇ 27ರೊಳಗೆ ಕಾರ್ಯದರ್ಶಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಚಿತ್ರದುರ್ಗ, ಜಿಲ್ಲಾ ಶಾಖೆ ಕಚೇರಿ, ಸ್ವಾತಂತ್ರ್ಯ ಹೋರಾಟಗಾರರ ಭವನ, ಸ್ಟೇಡಿಯಂ ರಸ್ತೆ, ಚಿತ್ರದುರ್ಗ ಮೊಬೈಲ್–7899187128 ಸಂಪರ್ಕಿಸಬೇಕು.

### ಬೂಕರ್ ಪ್ರಶಸ್ತಿ ಪುರಸ್ಕೃತ ಬಾನುಮುಷ್ತಾಕ್, ದೀಪಾಗೆ ಅಭಿನಂದನಾ ಕಾರ್ಯಕ್ರಮ

» ಬೆಂಗಳೂರು

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ (ಕೆಯುಡಬ್ಲೂಜೆ)ಅಂತರರಾಷ್ಟ್ರೀಯಬೂಕರ್‌ಪ್ರಶಸ್ತಿ ಪುರಸ್ಕೃತರಾದ ಖ್ಯಾತ ಸಾಹಿತಿ ಬಾನುಮುಷ್ತಾಕ್, ಅನುವಾದಕಿ ದೀಪಾ ಭಾಸ್ತಿ ಅವರಿಗೆ ಮೇ 28 ಬುಧವಾರ ಸಂಜೆ 4 ಗಂಟೆಗೆ ಗಾಂಧಿಭವನದಲ್ಲಿ ಅಭಿನಂದನಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮವನ್ನು ಕರ್ನಾಟಕ ಗಾಂಧಿ ಸ್ಮಾರಕ ನಿಧಿ, ಬಹುರೂಪಿ, ಕರ್ನಾಟಕ ಪತ್ರಕರ್ತೆಯರ ಸಂಘದ ಸಹಯೋಗದಲ್ಲಿ ಸಂಘಟಿಸಲಾಗಿದೆ. ಬೂಕರ್ ಪ್ರಶಸ್ತಿಗೆ ಭಾಜನರಾಗಿರುವ ಬಾನುಮುಷ್ತಾಕ್ ಮತ್ತು ದೀಪಾಬಸ್ತಿ ಅವರು ಇಬ್ಬರೂ ಮೂಲತಃ ಪತ್ರಕರ್ತರಾಗಿದ್ದವರು ಎನ್ನುವ ಕಾರಣದಿಂದ ಮೊದಲ ಅಭಿನಂದನಾ ಕಾರ್ಯಕ್ರಮವನ್ನು ಕೆಯುಡಬ್ಲೂಣಟಿಜಜಜಿಟಿಜಜಜೆ ಸಂಘಟಿಸಿದೆ. ಅಭಿನಂದನಾ ಕಾರ್ಯಕ್ರಮ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರ ಅಧ್ಯಕ್ಷತೆಯಲ್ಲಿ ನಡೆಯಲಿದ್ದು, ಬಹುರೂಪಿ ಸಂಸ್ಥೆಯ ಜಿ.ಎನ್.ಮೋಹನ್ ಅವರು ಪ್ರಸ್ತಾವಿಕವಾಗಿ ಮಾತನಾಡುವರು. ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ವಿಜಯವಾಣಿ ಸಂಪಾದಕ ಕೆ.ಎನ್.ಚನ್ನೇಗೌಡ, ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ವೂಡೇ ಪಿ.ಕೃಷ್ಣ, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಾ ಖಾನಂ, ಕರ್ನಾಟಕ ಪತ್ರಕರ್ತೆಯರ ಸಂಘದ ಅಧ್ಯಕ್ಷೆ ಪದ್ಮ ಶಿವಮೊಗ್ಗ ಅವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಎಲ್ಲರೂ ಭಾಗವಹಿಸುವಂತೆ ಕೆಯುಡಬ್ಲೂಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಜಾಗೃತ ಮನಸ್ಸುಗಳ ಜವಾಬ್ದಾರಿ.......



**ಚಳಿ ತಡೆಯಲಾರದೆ ರಸ್ತೆ ಬದಿಯಲ್ಲಿ ಮಲಗಿರುವ ಮಗು,**

**ಒಂದು ತುತ್ತು ಅನ್ನಕ್ಕಾಗಿ ದೇವ ಮಂದಿರಗಳ ಮುಂದೆ**

**ಹಸಿವಿನಿಂದ ಅಂಗಲಾಚುತ್ತಿರುವ ಪುಟ್ಟ ಕಂದ,**

**ತನ್ನ ಹಾಗೂ ತನ್ನ ನಂಬಿದವರ ಊಟಕ್ಕಾಗಿ**

**ಯಾರೋ ಅಪರಿಚಿತನಿಗೆ ದೇಹ ಅರ್ಪಿಸುವ ಹೆಣ್ಣು,**

**ಹಸಿವು ನೀಗಿಕೊಳ್ಳಲು, ಸಂಸಾರ ನಡೆಸಲು ಇತರರ ಮಲ ಹೊತ್ತು ಸಾಗುವ ವ್ಯಕ್ತಿ,**





ರೋಗ ಉಲ್ಬಣಿಸಿದ್ದರೂ ಚಿಕಿತ್ಸೆ ಪಡೆಯಲು ಕಾಸಿಲ್ಲದೆ ಸಾವನ್ನು ಎದುರು ನೋಡುತ್ತಿರುವ ಜೀವ,

ತಾನು ಮಾಡದ ತಪ್ಪಿಗೆ ಜೈಲುಪಾಲಾಗಿ

ಕೋರ್ಟನಿಂದ ಜಾಮೀನು ಸಿಕ್ಕರೂ ಶ್ಯೂರಿಟಿ ಇಲ್ಲದೇ

ವರ್ಷಾನುಗಟ್ಟಲೆ ಜೈಲಿನಲ್ಲಿ ಕೊಳೆಯುತ್ತಿರುವ ನತದೃಷ್ಟ,

ಓದುವ ಆಸೆ ಇದ್ದರು ಬಡತನದಿಂದ ಸಾಧ್ಯವಾಗದೆ ಹೋಟೆಲ್ಲಿನಲ್ಲಿ

ದಿನದ 18 ಗಂಟೆ ದುಡಿಯುವ ಪುಟ್ಟ ಕಂದಮ್ಮಗಳು,

ಮದುವೆ ವಯಸ್ಸು ಮೀರಿದ್ದರೂ ಮದುವೆಯಾಗದೆ ತನ್ನ ಓರಗೆಯವರು ತಮ್ಮ ಮಕ್ಕಳೊಂದಿಗೆ ಆಟವಾಡುವುದನ್ನು ನೋಡುತ್ತಾ

ತನ್ನ ದರಿದ್ರ ದುರಾದೃಷ್ಟದ ಅಸಹಾಯಕತೆಗೆ ಕೊರಗುವ ಅಬಲೆ,

ಸೇಬು,ಐಸ್‌ಕ್ರೀಮ್,ಡ್ರೈಪ್ರೂಟ್ಸ್‌ಗಳನ್ನು ಜೀವನದಲ್ಲಿ ಒಮ್ಮೆಯೂ ಸವಿಯದ ಕೋಟ್ಯಾಂತರ ಜನ ವಾಸಿಸುತ್ತಿರುವ ಈ ನಮ್ಮ ಸಮಾಜದಲ್ಲಿ,

ರಾಜಕಾರಣಿಗಳು ಆಡಳಿತಗಾರರು, ಸಿನಿಮಾ ನಟರು, ಪತ್ರಿಕೋದ್ಯಮಿಗಳು,

ವ್ಯಾಪಾರಿಗಳು, ಸಾಹಿತಿಗಳು, ಮಠಾಧೀಶರು, ...ಇತ್ಯಾದಿ, ಇತ್ಯಾದಿಗಳು.........

ಮಹಾನ್ ನಾಗರೀಕರಂತೆ,

ಇರುವ – ಇಲ್ಲದ – ದೇವರು ಧರ್ಮ, ಜಾತಿ,

ತತ್ವ ಸಿದ್ಧಾಂತ, ವಾಕ್ ಚಾತುರ್ಯಗಳನ್ನು ಪ್ರದರ್ಶಿಸುತ್ತಾ, ತಮಗೂ ಇದಕ್ಕೂ ಸಂಬಂಧವಿಲ್ಲದಿರುವಂತೆ ಜೀವಿಸುತ್ತಿರುವುದನ್ನು,

ನೋಡಿದರೆ,

ಈ ಅಭಿವೃದ್ಧಿ ಮತ್ತು ಚಿಂತನೆಗಳ ಕ್ರಮವನ್ನೇ ಪ್ರಶ್ನಿಸಿಕೊಳ್ಳಬೇಕೆನಿಸುತ್ತದೆ.

ಕನಿಷ್ಠಮಟ್ಟದನಾಗರಿಕಸೌಲಭ್ಯಗಳನ್ನು ಈ ಜನರಿಗೆ ತಲುಪಿಸಲು ಸಾಧ್ಯವಾಗದ ವ್ಯವಸ್ಥೆಯ ಬಗ್ಗೆ ಜಿಗುಪ್ಸೆ ಮೂಡುತ್ತದೆ.

ಎಷ್ಟೊಂದು ಕ್ರಮಬದ್ಧ ಆಡಳಿತ ವ್ಯವಸ್ಥೆ ಇದೆ. ಗ್ರಾಮ ಪಂಚಾಯತಿಯಿಂದ ಕೇಂದ್ರ ಸರ್ಕಾರದವರೆಗೆ ಮತ್ತು ಇದನ್ನು ನಿರ್ವಹಿಸುವವರು ಶಿಶಿವಿಹಾರದಿಂದ ಡಾಕ್ಟರೇಟ್ ವರೆಗೆ ಓದಿರುತ್ತಾರೆ.

ಸಾಕಷ್ಟು ಸಂಬಳ ಮತ್ತು ಇತರ ಸೌಲಭ್ಯಗಳನ್ನು ಪಡೆಯುತ್ತಾರೆ.

ಇದನ್ನು ಬೇರೆ ಬೇರೆ ರೀತಿಯಲ್ಲಿ ನಿಯಂತ್ರಿಸಲು ಸಹಕರಿಸಲು ಮೇಲ್ವಿಚಾರಣೆ ನಡೆಸಲು ಅನೇಕ ಮತ್ತಷ್ಟು ಸರ್ಕಾರಿ ಸಂಸ್ಥೆಗಳೇ ಇವೆ.

ಆದರೂ ಸಾಕಷ್ಟು ಉತ್ತಮ ವಾತಾವರಣ ನಿರ್ಮಿಸಲು ಸಾಧ್ಯವಾಗುತ್ತಿಲ್ಲ.


ಹೌದು, ಒಂದಷ್ಟು ಜನ ಇದರ ಸಂಪೂರ್ಣ ಲಾಭ ಪಡೆದು ಸುಖವಾಗಿದ್ದಾರೆ. ಅವರುಗಳಿಗೆ ಯಾವುದೇ ತಕರಾರು ಇಲ್ಲ.

ಹಾಗೆಂದು ಜಾಗೃತಗೊಂಡ ಮನಸ್ಸುಗಳು ಸುಮ್ಮನೆ ಇರಬಾರದು. ಯಾವುದಾದರೂ ರೀತಿಯಲ್ಲಿ ಈ ವ್ಯವಸ್ಥೆಯ ನಾಗರಿಕ ಸೌಲಭ್ಯಗಳನ್ನು ವಂಚಿತರಿಗೆ ತಲುಪಿಸಲು ಪ್ರಯತ್ನಿಸಬೇಕಿದೆ.

ಇಲ್ಲದಿದ್ದರೆ ಮುಂದೆ ಈ ಅಂತರ ಹೆಚ್ಚಾದಂತೆ ಈಗ ನೆಮ್ಮದಿಯಿಂದ ಇರುವವರ ಅನುಕೂಲಗಳಿಗೂ ತೊಂದರೆಯಾಗುವ ಸಾಧ್ಯತೆ ಇದೆ.

ಕ್ರಿಯಾತ್ಮಕ ಮಾನವೀಯ ಮನಸ್ಸುಗಳು ಈ ಬಗ್ಗೆ ಮತ್ತಷ್ಟು ಚಿಂತಿಸುವುದು ವ್ಯವಸ್ಥೆಯ ಸುಧಾರಣೆಯ ದೃಷ್ಟಿಯಿಂದ ತುಂಬಾ ಅವಶ್ಯಕತೆ ಇದೆ.

ಮುಂದಿನ ದಿನಗಳು ಮತ್ತಷ್ಟು ಹದಗೆಡುವ ಮುನ್ನ ಎಚ್ಚರಿಕೆಯಿಂದ ಮುನ್ನಡೆಯುಬೇಕಿದೆ.......ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ.



» ಲೇಖನ
ವಿವೇಕಾನಂದ.
ಹೆಚ್.ಕೆ. 9844013068

**ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಚುನಾವಣೆ ಯಶಸ್ವಿ :**

# ತಳಕು ಸಾಲಗಾರರಲ್ಲದ ಕ್ಷೇತ್ರದಿಂದ ಟಿಎಟಿ ಕುಮಾರ್ ಆಯ್ಕೆ

» ಚಳ್ಳಕೆರೆ

ತಾಲ್ಲೂಕು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿಯಮಿತ ಇದರ ನಿರ್ದೇಶಕರ ಸ್ಥಾನಕ್ಕೆ ಭಾನುವಾರ ಚುನಾವಣೆ ನಡೆದಿದ್ದು, ಸಂಜೆ ಮತಗಳ ಏಣಿಕೆಯೂ ಸಹ ನಡೆಯಿತು. ಚುನಾವಣಾಧಿಕಾರಿಯಾಗಿ ಹಿರಿಯೂರು ಸಿಡಿಒ ಶಿವಮೂರ್ತಿ ಕಾರ್ಯನಿರ್ವಹಿಸಿದರು ಎಂದು ಬ್ಯಾಂಕ್ ವ್ಯವಸ್ಥಾಪಕ ಪ್ರಭು ತಿಳಿಸಿದರು.

ಪ್ರಸ್ತುತ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನಲ್ಲಿ 15 ಸ್ಥಾನಗಳಿಗೆ ಚುನಾವಣೆ ನಡೆದಿದ್ದು ಈಗಾಗಲೇ 6 ಸ್ಥಾನ ಅವಿರೋಧವಾಗಿ ಆಯ್ಕೆಯಾಗಿದ್ದು, 8 ಸ್ಥಾನಗಳಿಗೆ ಚುನಾವಣೆ ನಡೆದು ವಿವಿಧ ಕ್ಷೇತ್ರಗಳಿಂದ ಅಭ್ಯರ್ಥಿಗಳು ಗೆಲವು ಸಾಧಿಸಿದ್ದಾರೆ. ಒಂದು ಸರ್ಕಾರಿ ನಾಮಿನಿಯೂ ಸೇರಿದಂತೆ ಒಟ್ಟು 15 ನಿರ್ದೇಶಕರು ಬ್ಯಾಂಕ್ ಆಡಳಿತಮಂಡಳಿಯಲ್ಲಿದ್ದು ರೈತರ ಹಿತವನ್ನು ಸಂರಕ್ಷಣೆ ಮಾಡುವರು.

ಪ್ರಸ್ತುತ ಈ ಬಾರಿಯ ಚುನಾವಣೆಯಲ್ಲಿ ಅತಿಹೆಚ್ಚು ಪೈಪೋಟಿ ನೀಡಿದ ಕ್ಷೇತ್ರವಾಗಿ ತಳಕು ಸಾಲಗಾರರಲ್ಲದ ಕ್ಷೇತ್ರ ಭಾರೀ ಪೈಪೋಟಿಯಿಂದ ಕೂಡಿತ್ತು. ಒಟ್ಟು 572 ಮತದಾರರು ಮತದಾನ ಹಕ್ಕು ಪಡೆದಿದ್ದು ಆ ಪೈಕಿ 266 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ.



ಭಾನುವಾರ ನಡೆದ ಮತಗಳ ಏಣಿಕೆಯಲ್ಲಿ ರಾಜಕೀಯ ಕ್ಷೇತ್ರದ ತಮ್ಮದೇಯಾದ ಛಾಪುಮೂಡಿಸಿರುವ ಕಾಂಗ್ರೆಸ್ ಪಕ್ಷದ ಕಟ್ಟಾಳು ಟಿ.ಎ.ತಿಪ್ಪೇಸ್ವಾಮಿಯವರ ಕುಟುಂಬದ ಕುಡಿ ಟಿಎಟಿ ಕುಮಾರ್ ಇದೇ ಮೊದಲಬಾರಿಗೆ ಪ್ರಾಥಮಿಕ ಸಹಕಾರಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ಗೆ ಅಭ್ಯರ್ಥಿಯಾಗಿ ಚುನಾವಣೆ ಎದುರಿಸಿ 266 ಮತಗಳಲ್ಲಿ 256 ಮತಗಳನ್ನು ಪಡೆದು ಆಯ್ಕೆಯಾಗಿದ್ದಾರೆ. ಇವರ ವಿರುದ್ಧ ಸ್ಪರ್ಧಿಸಿದ್ದ ಅಭ್ಯರ್ಥಿ ಕೇವಲ 10 ಮತಗಳನ್ನು ಮಾತ್ರ ಪಡೆದಿದ್ದರು.

ಗೆಲುವು ಸಾಧಿಸಿದ ಟಿಎಟಿ ಕುಮಾರ್ ಪತ್ರಿಕೆಯೊಂದಿಗೆ ಮಾತನಾಡಿ, ಕಳೆದ ಹಲವಾರು ದಶಕಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ನಮ್ಮ ಕುಟುಂಬದ ಅನೇಕರು ವಿವಿಧ ಜವಾಬ್ದಾರಿಗಳನ್ನು ಹೊತ್ತು ಕಾರ್ಯನಿರ್ವಹಿಸಿದ್ದಾರೆ. ನನ್ನ ತಂದೆ ದಿವಂಗತ ಟಿ.ತಿಪ್ಪೇಸ್ವಾಮಿ ಸಹ ಕಾಂಗ್ರೆಸ್ ಪಕ್ಷದ ಹಿತಕ್ಕಾಗಿ ಶ್ರಮಿಸಿದವರು. ನನ್ನ ಸಹೋದರ ಟಿ.ಪ್ರಭುದೇವ್ ಕಳೆದ 1989ರಲ್ಲಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಸ್ಪರ್ಧಿಸಿ ಸೋಲುಕಂಡರೂ ಇಂದಿಗೂ ರಾಜಕೀಯ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ನಾನು ಸಹ ಈ ಹಿಂದೆ ಚಳ್ಳಕೆರೆ ಕೃಷಿ ಉತ್ಪನ್ನಮಾರುಕಟ್ಟೆ ಸಮಿತಿಗೆ ಚುನಾವಣೆ ಮೂಲಕ ಆಯ್ಕೆಯಾಗಿದ್ದೆ. ಪ್ರಸ್ತುತ ತಳಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷನಾಗಿ ಕಾರ್ಯನಿರ್ವಹಿಸುತ್ತಿದ್ದೇನೆ. ಇದೇ ಮೊದಲ ಬಾರಿಗೆ ಪಿಎಲ್‌ಡಿ ಬ್ಯಾಂಕ್ ಚುನಾವಣೆಗೆ ಪ್ರವೇಶಿಸಿ ಜಯಸಾಧಿಸಿದ್ದೇನೆ. ನನ್ನ ಗೆಲುವಿಗೆ ಕ್ಷೇತ್ರದ ನೂರಾರು ಕಾರ್ಯಕರ್ತರು. ಅಭಿಮಾನಿಗಳು, ಪಕ್ಷದ ಬೆಂಬಲಿಗರು ಹಗಲುರಾತ್ರಿ ಶ್ರಮಿಸಿದ್ದಾರೆ. ನನ್ನ ಅಳಿಯಂದಿರಾದ ಚಿತ್ರದುರ್ಗ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರ, ಜಿಲ್ಲಾ ಪಂಚಾಯಿತಿ ಕೆಡಿಪಿ ಸದಸ್ಯ ಕೆ.ಸಿ.ನಾಗರಾಜು ಹೆಚ್ಚು ಶ್ರಮಪಟ್ಟಿದ್ದಾರೆ. ಪ್ರಸ್ತುತ ನಾಗರಾಜು ಸಹ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ರೈತರ ಅಭಿವೃದ್ಧಿಗಾಗಿ ಶ್ರಮಿಸುತ್ತೇನೆಂದರು.

ಭಾನುವಾರ ನಡೆದ ಚುನಾವಣೆಯಲ್ಲಿ ತಳಕು ಸಾಲಗಾರರಲ್ಲದ ಕ್ಷೇತ್ರದಿಂದ ಮಾತ್ರ ಹೆಚ್ಚು ಮತಗಳಿದ್ದು, ಅವುಗಳಲ್ಲಿ ಶೇ.60ರಷ್ಟು ಮತಗಳು ಚಲಾವಣೆಯಾಗಿವೆ. ಉಳಿದಂತೆ ಬೇರೆ, ಬೇರೆ ಕ್ಷೇತ್ರಗಳಲ್ಲಿ ಕಡಿಮೆ ಪ್ರಮಾಣದ ಮತಗಳಿದ್ದು, ಅಭ್ಯರ್ಥಿಗಳು ಗೆಲುವು ಸಾಧಿಸಲು ಸಹಕಾರಿಯಾಗಿದೆ.

ಕ್ಯಾದಿಗುಂಟೆ ಕ್ಷೇತ್ರದಿಂದ ಕೆ.ಜಲ್ದೀರಪ್ಪ, ಬುಕ್ಕಾಂಬೂದಿ ಕ್ಷೇತ್ರದಿಂದ ಎನ್. ಮಂಜುನಾಥ, ಭರಮಸಾಗರ ಕ್ಷೇತ್ರದಿಂದ ಬಿ.ವೀರಭದ್ರಪ್ಪ, ಚಿಗತನಹಳ್ಳಿ ಕ್ಷೇತ್ರದಿಂದ ಸಿ.ಎಲ್.ಸತೀಶ್‌ಬಾಬು, ಕುರುಡಿಹಳ್ಳಿ ಕ್ಷೇತ್ರದಿಂದ ಸಿ.ಎ.ಪ್ರಶಾಂತ್, ಗೊರ್ಲತ್ತು ಕ್ಷೇತ್ರದಿಂದ ಮಹದೇವಮ್ಮ, ಮೈಲನಹಳ್ಳಿ ಕ್ಷೇತ್ರದಿಂದ ಓಬಳಮ್ಮ, ತಳಕು ಕ್ಷೇತ್ರದಿಂದ ಟಿಎಟಿ ಕುಮಾರ್ ಚುನಾವಣೆ ಮೂಲಕ ಆಯ್ಕೆಗೊಂಡಿರುತ್ತಾರೆ.

ಕೆ.ಜಲ್ದೀರಪ್ಪ, ಎನ್.ಮಂಜುನಾಥ, ಬಿ.ವೀರಭದ್ರಪ್ಪ, ಸಿ.ಎಲ್.ಸತೀಶ್‌ಬಾಬು ಈ ಹಿಂದಿನ ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದರು. ಬೇಡರೆಡ್ಡಿಹಳ್ಳಿ ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ಚನ್ನಗಾನಹಳ್ಳಿಯ ತಿಪ್ಪಮ್ಮ, ನಾಯಕನಹಟ್ಟಿ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದಿಂದ ನೇರ್ಲಗುಂಟೆಯ ಚಂದ್ರಣ್ಣ, ತಳಕು ಸಾಮಾನ್ಯ ಕ್ಷೇತ್ರದಿಂದ ತಳಕು ಕೆ.ಸಿ.ನಾಗರಾಜು, ಅಬ್ಬೇನಹಳ್ಳಿ ಸಾಮಾನ್ಯ ಕ್ಷೇತ್ರದಿಂದ ಎನ್.ಮಹದೇವಪುರದ ಬಿ.ನಾಗರಾಜು, ಚಳ್ಳಕೆರೆಸಾಮಾನ್ಯ ಕ್ಷೇತ್ರದಿಂದ ನರಹರಿನಗರದ ಬಿ.ಸಿ.ಸತೀಶ್‌ಕುಮಾರ್, ಜಾಜೂರು ಹಿಂದುಳಿದ ಪ್ರವರ್ಗ–ಎ ಕ್ಷೇತ್ರದಿಂದಹಾಲಿಗೊಂಡನಹಳ್ಳಿಪುಟ್ಟೀರಮ್ಮ ಅವಿರೋಧವಾಗಿ ಆಯ್ಕೆಯಾರುತ್ತಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T